ಸಂಪುಟ : 11 ಸಂಚಿಕೆ: 98 ಪುಟ : 4+2 ಬೆಲೆ: 3.00 ಮಂಗಳವಾರ ಮೇ 19 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 98 Pages : 4+2 Price : 3.00 Tuesday May 19 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಗದಗ ರೈತರಿಗೆ ಗುಡ್ ನ್ಯೂಸ್

**■ವಿಜಯಸಾಕ್ಷಿ ಸುದ್ದಿ, ಗದಗ**

ದ್ವಿದಳಧಾನ್ಯಗಳಲ್ಲಿ ಮೌಲ್ಯವರ್ಧನೆ ಉತ್ತೇಜಿಸಿ ರೈತರ ಆದಾಯವನ್ನು ಹೆಚ್ಚಿಸುವ ಉದ್ದೇಶದಿಂದ, ಗದಗ ಜಿಲ್ಲೆಯ ಅರ್ಹ ಫಲಾನುಭವಿಗಳಿಂದ ದ್ವಿದಳಧಾನ್ಯ ಸಂಸ್ಕರಣಾ ಘಟಕಗಳ ಸ್ಥಾಪನೆಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಜೂನ್ 15 ಕೊನೆಯ ದಿನವಾಗಿದೆ.

ಆಸಕ್ತ ರೈತರು, ರೈತ ಉತ್ಪಾದಕ ಸಂಸ್ಥೆಗಳು (ಈಕಿಔ), ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಹಾಗೂ ನೋಂದಾಯಿತ ಸಂಸ್ಥೆಗಳು ಅರ್ಜಿ ಸಲ್ಲಿಸಬಹುದಾಗಿದೆ. ಕೇಂದ್ರ ಮತ್ತು ರಾಜ್ಯ ಸರ್ಕಾರದ 60:40 ಅನುಪಾತದ ಯೋಜನೆಯಡಿ, ಒಟ್ಟು ಯೋಜನಾ ವೆಚ್ಚದ ಶೇ.33ರಷ್ಟು ಸಹಾಯಧನ ನೀಡಲಾಗುತ್ತಿದ್ದು, ಗರಿಷ್ಠ ರೂ.25 ಲಕ್ಷವರೆಗೆ ಅನುದಾನ ಲಭ್ಯವಿರುತ್ತದೆ.

ಯೋಜನೆಯಡಿ ಬ್ಯಾಂಕ್ ಸಾಲ ಪಡೆಯುವುದು ಕಡ್ಡಾಯವಾಗಿದ್ದು, ಫಲಾನುಭವಿಗಳು ಯೋಜನಾ ವೆಚ್ಚದ ಶೇ.15ರಷ್ಟು ಸ್ವಂತ ಬಂಡವಾಳ ಹೂಡುವ ಸಾಮರ್ಥ್ಯ ಹೊಂದಿರಬೇಕು.

ಆಸಕ್ತ ಫಲಾನುಭವಿಗಳು ಜೂನ್ 15ರೊಳಗಾಗಿ ಸಂಬಂಧಿಸಿದ ತಾಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ರೈತ ಸಂಪರ್ಕ ಕೇಂದ್ರ ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಾಂತಿಯುತ ನಡೆದ ಎಸ್ಎಸ್ಎಲ್‌ಸಿ ಪರೀಕ್ಷೆ-2

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯ 2026ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆ-2ರ ಭಾಷೆ-1 ವಿಷಯದ ಪರೀಕ್ಷೆ ಭಾನುವಾರ ಜಿಲ್ಲೆಯ ಏಳು ಪರೀಕ್ಷಾ ಕೇಂದ್ರಗಳಲ್ಲಿ ಶಾಂತಿಯುತ ಹಾಗೂ ಸುಸೂತ್ರವಾಗಿ ನಡೆಯಿತು.

ಪರೀಕ್ಷಾ ಕೇಂದ್ರಗಳಿಗೆ ಜಿಲ್ಲಾಧಿಕಾರಿಗಳಿಂದ ನೇಮಕಗೊಂಡ ವೀಕ್ಷಕರು ಭೇಟಿ ನೀಡಿ ಮೇಲ್ವಿಚಾರಣೆ ನಡೆಸಿದರು. ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಕಚೇರಿಯಿಂದ ಜಿಲ್ಲಾ ವೀಕ್ಷಕ ದಳ ಹಾಗೂ ಸ್ಥಾನಿಕ ಜಾಗೃತ ದಳದ ಅಧಿಕಾರಿಗಳನ್ನು ನಿಯೋಜಿಸಲಾಗಿತ್ತು.

ನಿಗದಿತ ವೇಳೆಗೆ ಎಲ್ಲಾ ಪರೀಕ್ಷಾ ಕೇಂದ್ರಗಳಿಗೆ ಪ್ರಶ್ನೆಪತ್ರಿಕೆಗಳನ್ನು ಸುರಕ್ಷಿತವಾಗಿ ತಲುಪಿಸಲಾಗಿದ್ದು, ಪರೀಕ್ಷೆ ಮುಕ್ತಾಯವಾದ ಬಳಿಕ ಉತ್ತರ ಪತ್ರಿಕೆಗಳನ್ನು ಪೊಲೀಸ್ ಬಿಗಿ ಬಂದೋಬಸ್ತಿನಲ್ಲಿ ಭದ್ರತಾ ಕೊಠಡಿಗೆ ಸಾಗಿಸಿ ಸಂಗ್ರಹಿಸಲಾಯಿತು.

ಜಿಲ್ಲೆಯ ಒಟ್ಟು 7 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆದಿದ್ದು, 1272 ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದರು. ಇವರಲ್ಲಿ 1018 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 80.03 ಶೇಕಡಾ ಹಾಜರಾತಿ ದಾಖಲಾಗಿದೆ.

ಒಟ್ಟು 254 ವಿದ್ಯಾರ್ಥಿಗಳು ಗೈರಾಗಿದ್ದು, ಗೈರು ಪ್ರಮಾಣ 19.97 ಶೇಕಡಾ ಆಗಿದೆ ಎಂದು

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ (ಆಡಳಿತ)ಆರ್.ಎಸ್. ಬುರಡಿ ತಿಳಿಸಿದ್ದಾರೆ.

### ಮೇ 31ರಂದು ಬಸವಾದಿ ಶಿವಶರಣರ ಬೃಹತ್ ಸಮಾವೇಶ । 300ಕ್ಕೂ ಹೆಚ್ಚು ಮಠಾಧೀಶರು, 25 ಸಾವಿರ ಜನ ಸೇರುವ ನಿರೀಕ್ಷೆ

# "ಗದಗದಲ್ಲಿ ಹಿಂದೂ ಶಕ್ತಿಯ ಮಹಾಸಂಗಮ!"

**■ವಿಜಯಸಾಕ್ಷಿ ಸುದ್ದಿ, ಗದಗ**

ಹಿಂದೂ ಸರ್ವ ಸಮಾಜಗಳ ಒಕ್ಕೂಟದ ಗದಗ ಜಿಲ್ಲಾ ಘಟಕದ ವತಿಯಿಂದ ಮೇ 31ರಂದು ಸಂಜೆ 5 ಗಂಟೆಗೆ ನಗರದ ವಿದ್ಯಾದಾನ ಸಮಿತಿ ಮೈದಾನದಲ್ಲಿ ಬಸವಾದಿ ಶಿವಶರಣರ ಬೃಹತ್ ಹಿಂದೂ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಒಕ್ಕೂಟದ ಸಂಚಾಲಕ ರಾಜು ಖಾನಪ್ಪನವರ ತಿಳಿಸಿದರು.



ನಗರದ ಶ್ರೀ ಮಹಾವೀರ ಗೋಸೇವಾ ಸಮಿತಿಯ ಸಭಾಂಗಣದಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೊಲ್ಹಾಪುರದ ಕನೇರಿ ಮಠದ ಅದೃಶ್ಯ ಕಾಡಸಿದ್ದೇಶ್ವರ ಸ್ವಾಮೀಜಿಗಳ ನೇತೃತ್ವದಲ್ಲಿ ಸಮಾವೇಶ ನಡೆಯಲಿದ್ದು, ರಾಜ್ಯದ 300ಕ್ಕೂ ಹೆಚ್ಚು ಮಠಾಧೀಶರು ಭಾಗವಹಿಸಲಿದ್ದಾರೆ ಎಂದು ಹೇಳಿದರು.

ಸಮಾವೇಶಕ್ಕೂ ಮುನ್ನ ಮಧ್ಯಾಹ್ನ 3 ಗಂಟೆಗೆ ನಗರದ ಭೂಮರೆಡ್ಡಿ ವೃತ್ತದಿಂದ ವಿದ್ಯಾದಾನ ಸಮಿತಿ ಮೈದಾನದವರೆಗೆ ಬೃಹತ್ ಮೆರವಣಿಗೆ ನಡೆಯಲಿದೆ. ಮೆರವಣಿಗೆಯಲ್ಲಿ ಸಾವಿರಾರು ಮಹಿಳೆಯರು ಪೂರ್ಣಕುಂಭ ಹೊತ್ತು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

> "ಹಿಂದೂ ಸಮಾಜ ಒಡೆಯುವ ಶಕ್ತಿಗಳಿಗೆ ಈ ಸಮಾವೇಶದ ಮೂಲಕ ಬಲವಾದ ಸಂದೇಶ ನೀಡಲಾಗುವುದು."
> **– ರಾಜು ಖಾನಪ್ಪನವರ, ಒಕ್ಕೂಟದ ಸಂಚಾಲಕ**

ಸಮಾವೇಶದ ಯಶಸ್ವಿಗಾಗಿ ಜಿಲ್ಲೆಯ 68 ಸಮಾಜಗಳ ಮುಖಂಡರನ್ನು ಒಳಗೊಂಡು ಒಕ್ಕೂಟ ರಚಿಸಲಾಗಿದೆ ಎಂದು ತಿಳಿಸಿದ ಅವರು, ಒಕ್ಕೂಟದ ಅಧ್ಯಕ್ಷರಾಗಿ ವಸಂತಗೌಡ ಪೊಲೀಸಪಾಟೀಲ, ಸಂಚಾಲಕರಾಗಿ ರವಿ ದಂಡಿನ ಹಾಗೂ ರಾಜು ಕುರುಡಗಿ, ಉಪಾಧ್ಯಕ್ಷರಾಗಿ ವಿಜಯಕುಮಾರ್ ಗಡ್ಡಿ, ದಶರಥ ಕೊಳ್ಳಿ, ಕಿರಣ ಬೂಮಾ, ಕಾರ್ಯದರ್ಶಿಯಾಗಿ ಈಶ್ವರಸಾ ಮೇರವಾಡೆ, ರುದ್ರಣ್ಣ ಗುಳಗುಳಿ, ಫಕೀರಸಾ ಭಾಂಡಗೆ, ಸಹ ಕಾರ್ಯದರ್ಶಿಗಳಾಗಿ ಅರವಿಂದ ಹುಲ್ಲೂರ, ಜಗದೀಶ ಪೂಜಾರ, ಸದಾಶಿವ ಮದರಿಮಠ, ರಾಜು ಗುಡಿಮನಿ ಹಾಗೂ ಖಜಾಂಚಿಯಾಗಿ ಬಸವರಾಜ ಬಿಂಗಿ ಅವರನ್ನು ಆಯ್ಕೆ ಮಾಡಲಾಗಿದೆ ಎಂದರು.

ಇದರ ಜೊತೆಗೆ ಸಮಾವೇಶದ ಯಶಸ್ಸಿಗಾಗಿ 10ಕ್ಕೂ ಹೆಚ್ಚು ಉಪಸಮಿತಿಗಳನ್ನು ರಚಿಸಿ ಪದಾಧಿಕಾರಿಗಳನ್ನು ನೇಮಕ ಮಾಡಲಾಗಿದೆ ಎಂದು ಹೇಳಿದರು.

▶▶3ನೇ ಪುಟಕ್ಕೆ

### ರಾಜ್ಯ ಸರ್ಕಾರದ ಕ್ರಮ 'ಮರಣಶಾಸನ'ದಂತೆ : ಎಸ್. ಅರುಣಕುಮಾರ ಆಕ್ರೋಶ

# "ಒಳಮೀಸಲಾತಿ ಹೆಸರಿನಲ್ಲಿ ಮಾದಿಗ ಸಮುದಾಯಕ್ಕೆ ಅನ್ಯಾಯ!"

**■ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯ ಸರ್ಕಾರ ಜಾರಿಗೊಳಿಸಿರುವ ಒಳಮೀಸಲಾತಿ ಮಾದಿಗ ಸಮುದಾಯಕ್ಕೆ ಮರಣಶಾಸನದಂತಾಗಿದೆ ಎಂದು ಕರ್ನಾಟಕ ಸಾಮಾಜಿಕ ನ್ಯಾಯಪರ ವಕೀಲರ ಸಂಘದ ರಾಜ್ಯಾಧ್ಯಕ್ಷ ಎಸ್. ಅರುಣಕುಮಾರ ಆರೋಪಿಸಿದರು.



ನಗರದ ಪತ್ರಿಕಾ ಭವನದಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಾದಿಗ ಸಮುದಾಯ ಕಳೆದ 35 ವರ್ಷಗಳಿಂದ ಒಳಮೀಸಲಾತಿಗಾಗಿ ನಿರಂತರ ಹೋರಾಟ ನಡೆಸುತ್ತಿದ್ದು, 2024ರ ಆಗಸ್ಟ್ 1ರಂದು ಸುಪ್ರೀಂ ಕೋರ್ಟ್ ಮಹತ್ವದ ತೀರ್ಪು ನೀಡಿದ ಬಳಿಕವೂ ರಾಜ್ಯ ಸರ್ಕಾರ ಸಮರ್ಪಕ ಕ್ರಮ ಕೈಗೊಂಡಿಲ್ಲ ಎಂದು ದೂರಿದರು.

ರಾಜ್ಯದಲ್ಲಿ ಸ್ಪಷ್ಟ ದತ್ತಾಂಶಗಳಿದ್ದರೂ ಸಹ ಸಚಿವ ಎಚ್.ಸಿ. ಮಹದೇವಪ್ಪ ಅವರು ಉದ್ದೇಶಪೂರ್ವಕವಾಗಿ ನಾಗಮೋಹನ್ ದಾಸ್ ವರದಿ ಜಾರಿಗೊಳಿಸಲು ಮುಂದಾದರು ಎಂದು ಆರೋಪಿಸಿದರು.

ಸಚಿವರಾದ ಎಚ್.ಸಿ. ಮಹದೇವಪ್ಪ, ಜಿ. ಪರಮೇಶ್ವರ ಹಾಗೂ ಪ್ರಿಯಾಂಕ್ ಖರ್ಗೆ ಅವರು ಆರಂಭದಿಂದಲೂ ಒಳಮೀಸಲಾತಿಯನ್ನು ವಿರೋಧಿಸುತ್ತಾ ಬಂದಿದ್ದಾರೆ ಎಂದು ಆರೋಪಿಸಿದ ಅವರು, ಸರ್ಕಾರ ಜಾರಿಗೊಳಿಸಿರುವ ಪ್ರಸ್ತುತ ಒಳಮೀಸಲಾತಿ ವ್ಯವಸ್ಥೆ ಅತ್ಯಂತ ಹಿಂದುಳಿದ ಮತ್ತು ನೋವು ಅನುಭವಿಸಿರುವ ಮಾದಿಗ ಸಮುದಾಯಕ್ಕೆ ಮಾರಕವಾಗಿದೆ ಎಂದು ಹೇಳಿದರು.


> "ಪ್ರಸ್ತುತ ಜಾರಿಯಲ್ಲಿರುವ ಒಳಮೀಸಲಾತಿ ಮಾದಿಗ ಸಮುದಾಯದ ಸಾಮಾಜಿಕ ನ್ಯಾಯದ ಕನಸಿಗೆ ದೊಡ್ಡ ಹೊಡೆತವಾಗಿದೆ."
> **– ಎಸ್. ಅರುಣಕುಮಾರ,** ಕರ್ನಾಟಕ ಸಾಮಾಜಿಕ ನ್ಯಾಯಪರ ವಕೀಲರ ಸಂಘದ ರಾಜ್ಯಾಧ್ಯಕ್ಷ

▶▶3ನೇ ಪುಟಕ್ಕೆ

## "ಮಳೆ-ಗಾಳಿಯ ಅಬ್ಬರಕ್ಕೆ ಶಿರಹಟ್ಟಿ ತತ್ತರ!"

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ರವಿವಾರ ಸಂಜೆ ಸುರಿದ ಭಾರೀ ಬಿರುಗಾಳಿ ಸಹಿತ ಮಳೆಗೆ ಶಿರಹಟ್ಟಿ ಪಟ್ಟಣ ಅಸ್ತವ್ಯಸ್ತಗೊಂಡಿದ್ದು, ಅನೇಕ ಗಿಡಮರಗಳು ನೆಲಕ್ಕುರುಳಿದ ಪರಿಣಾಮ ಜನಜೀವನ ಕೆಲಕಾಲ ಅಸ್ತವ್ಯಸ್ತಗೊಂಡಿತು.



ಸಂಜೆ ಸುಮಾರು 4.30ರ ವೇಳೆಗೆ ಏಕಾಏಕಿ ಆರಂಭವಾದ ಬಿರುಗಾಳಿ ಹಾಗೂ ಮಳೆಯಿಂದ ಪಟ್ಟಣದ ವಿವಿಧ ಭಾಗಗಳಲ್ಲಿ ಗಿಡಮರಗಳು ಧರೆಗೆ ಉರುಳಿದವು. ರವಿವಾರ ಸಂತೆ ದಿನವಾಗಿದ್ದರಿಂದ ಮಾರುಕಟ್ಟೆಯಲ್ಲಿ ಜನಸಂದಣಿ ಹೆಚ್ಚಿದ್ದು, ವ್ಯಾಪಾರಸ್ಥರು ತಮ್ಮ ವಸ್ತುಗಳನ್ನು ರಕ್ಷಿಸಿಕೊಳ್ಳಲು ಹರಸಾಹಸ ಪಟ್ಟರು.

▶▶3ನೇ ಪುಟಕ್ಕೆ

## ದೇವೇಗೌಡರಿಗೆ ಜನ್ಮದಿನದ ಶುಭಾಶಯ ಕೋರಿದ ಗೋವಿಂದಗೌಡ್ರ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಮಾಜಿ ಪ್ರಧಾನಿ ಹಾಗೂ ಜೆಡಿಎಸ್ ರಾಷ್ಟ್ರೀಯ ಅಧ್ಯಕ್ಷ ಎಚ್.ಡಿ. ದೇವೇಗೌಡ ಅವರ 94ನೇ ಜನ್ಮದಿನ ಅಂಗವಾಗಿ ಜೆಡಿಎಸ್ ಪಕ್ಷದ ರಾಜ್ಯ ವಕ್ತಾರರಾದ ವೆಂಕನಗೌಡ ಆರ್. ಗೋವಿಂದಗೌಡ್ರ ಹಾಗೂ ಪ್ರದೀಪ್ ಕುಮಾರ ಅವರು ಬೆಂಗಳೂರಿನ ಪದ್ಮನಾಭನಗರದಲ್ಲಿರುವ ದೇವೇಗೌಡರ ನಿವಾಸಕ್ಕೆ ಭೇಟಿ ನೀಡಿ ಶುಭಾಶಯ ಕೋರಿದರು.



ಈ ಸಂದರ್ಭದಲ್ಲಿ ದೇವೇಗೌಡರಿಗೆ ಜನ್ಮದಿನದ ಶುಭಾಶಯಗಳನ್ನು ತಿಳಿಸಿ ಆಶೀರ್ವಾದ ಪಡೆದರು.

### ಗೃಹರಕ್ಷಕ ದಳದ ಜಿಲ್ಲಾ ಬೋಧಕ ಕಿರಣಕುಮಾರ ಕಟಗಿ ಸನ್ಮಾನ

# "ಪ್ರಾಮಾಣಿಕ ಸೇವೆಗೆ ಸಿಎಂ ಚಿನ್ನದ ಪದಕ!"

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪೊಲೀಸ್ ಇಲಾಖೆಯೊಂದಿಗೆ ಸಮನ್ವಯದಿಂದ ಕಾರ್ಯನಿರ್ವಹಿಸುತ್ತಾ ಅನೇಕ ಕಾನೂನು ಸುವ್ಯವಸ್ಥೆ ಕಾರ್ಯಗಳಲ್ಲಿ ಕೈಜೋಡಿಸುತ್ತಿರುವ ಗೃಹರಕ್ಷಕ ದಳದ ಸಿಬ್ಬಂದಿಯ ಸೇವೆ ಶ್ಲಾಘನೀಯವಾಗಿದೆ ಎಂದು ಮುಖ್ಯಮಂತ್ರಿ ಚಿನ್ನದ ಪದಕ ಪುರಸ್ಕೃತ ಗೃಹರಕ್ಷಕ ದಳದ ಜಿಲ್ಲಾ ಬೋಧಕ ಕಿರಣಕುಮಾರ ಕಟಗಿ ಹೇಳಿದರು.



> "ಯಾವ ಹುದ್ದೆಯೂ ಚಿಕ್ಕದಲ್ಲ; ಪ್ರಾಮಾಣಿಕ ಸೇವೆಯೇ ವ್ಯಕ್ತಿಗೆ ನಿಜವಾದ ಗೌರವ ತಂದುಕೊಡುತ್ತದೆ."
> **– ಕಿರಣಕುಮಾರ ಕಟಗಿ,** ಗೃಹರಕ್ಷಕ ದಳದ ಜಿಲ್ಲಾ ಬೋಧಕ

ಸೋಮವಾರ ಪಟ್ಟಣದ ಗೃಹರಕ್ಷಕ ದಳದ ಸಿಬ್ಬಂದಿಗಳ ವತಿಯಿಂದ ಆಯೋಜಿಸಿದ್ದ ಸನ್ಮಾನ ಸಮಾರಂಭದಲ್ಲಿ ಗೌರವ ಸ್ವೀಕರಿಸಿ ಅವರು ಮಾತನಾಡಿದರು.

ಯಾವುದೇ ಕೆಲಸ ಮಾಡುತ್ತಿದ್ದರೂ ಅದರಲ್ಲಿ ನಿಷ್ಠೆ, ಪ್ರಾಮಾಣಿಕತೆ ಮತ್ತು ಜವಾಬ್ದಾರಿ ಇರಬೇಕು. ಯಾವ ಹುದ್ದೆಯನ್ನೂ ಚಿಕ್ಕದಾಗಿ ಪರಿಗಣಿಸಬಾರದು ಎಂದು ಹೇಳಿದರು.

ಜಿಲ್ಲೆಯ ಗೃಹರಕ್ಷಕ ದಳದ ಸಿಬ್ಬಂದಿಗಳು ಪ್ರಾಮಾಣಿಕವಾಗಿ ಸೇವೆ ಸಲ್ಲಿಸುತ್ತಿರುವುದೇ ತಮಗೆ ಮುಖ್ಯಮಂತ್ರಿ ಚಿನ್ನದ ಪದಕ ದೊರಕಲು ಕಾರಣವಾಗಿದೆ ಎಂದು ತಿಳಿಸಿದ ಅವರು, "ಈ ಗೌರವವನ್ನು ಜಿಲ್ಲೆಯ ಎಲ್ಲಾ ಸಿಬ್ಬಂದಿಗಳಿಗೆ ಅರ್ಪಿಸುತ್ತೇನೆ" ಎಂದು ಹೇಳಿದರು.

ಸನ್ಮಾನಗಳು ಜವಾಬ್ದಾರಿಯನ್ನು ಮತ್ತಷ್ಟು ಹೆಚ್ಚಿಸುತ್ತವೆ. ಇಂದಿನ ಗೌರವ ಇನ್ನಷ್ಟು ಉತ್ತಮ ಸೇವೆ ಸಲ್ಲಿಸಲು ಪ್ರೇರಣೆ ನೀಡಿದೆ ಎಂದು ಅವರು ಅಭಿಪ್ರಾಯಪಟ್ಟರು.

ಪಿಎಸ್ಐ ನಾಗರಾಜ ಗಡದ ಮಾತನಾಡಿ, ಕಿರಣಕುಮಾರ ಕಟಗಿ ಅವರು ಪ್ರಾಮಾಣಿಕ ಹಾಗೂ ದಕ್ಷ ಅಧಿಕಾರಿಯಾಗಿ ಸೇವೆ ಸಲ್ಲಿಸುತ್ತಿದ್ದು, ಕಡಿಮೆ ಅವಧಿಯಲ್ಲೇ ಮುಖ್ಯಮಂತ್ರಿ ಪದಕಕ್ಕೆ ಭಾಜನರಾಗಿರುವುದು ಹೆಮ್ಮೆಯ ವಿಷಯವಾಗಿದೆ ಎಂದರು.

"ಎಲ್ಲಿ ಪ್ರಾಮಾಣಿಕತೆ ಮತ್ತು ನಿಷ್ಠೆ ಇರುತ್ತದೆಯೋ ಅಲ್ಲಿ ಪ್ರಶಸ್ತಿಗಳು ತಾನಾಗಿಯೇ ಬರುತ್ತವೆ" ಎಂದು ಹೇಳಿದರು. ಗೃಹರಕ್ಷಕ ದಳದ ಸಿಬ್ಬಂದಿಗಳು ಪೊಲೀಸ್ ಇಲಾಖೆಗೆ ಅತ್ಯಂತ ಸಹಕಾರಿಯಾಗಿದ್ದು, ಅವರಿಗೆ ಇನ್ನಷ್ಟು ಸೌಲಭ್ಯ ದೊರಕುವಂತಾಗಬೇಕು ಎಂದು ಆಶಿಸಿದರು. ಗೃಹರಕ್ಷಕ ದಳದ ಜಿಲ್ಲಾ ಸಮಾದೇಶಕ ಸಿ.ಬಿ. ಗೂಳರಡ್ಡಿ ಮಾತನಾಡಿ, ಸಿಬ್ಬಂದಿಗಳ ಸೇವಾ ಮನೋಭಾವಕ್ಕೆ ಅಭಿನಂದನೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ನಿವೃತ್ತ ಗೃಹರಕ್ಷಕ ದಳದ ಸಿಬ್ಬಂದಿಗಳಾದ ಸಿ.ಜಿ. ಹೂವಿನ, ಬಿ.ಎನ್. ಛಬ್ಬಿ, ಸೋಮಶೇಖರಯ್ಯ ಕಲ್ಮಠ, ಬಿ.ಎಚ್. ಬೆಂತೂರ, ಸಿ.ಎನ್. ಅಗಡಿ, ಎಂ.ಎಸ್. ಬೂದಿಹಾಳ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಧಾರವಾಡ-ಹಾವೇರಿ ಪೊಲೀಸರ ಜಂಟಿ ಕಾರ್ಯಾಚರಣೆ । ₹1.15 ಕೋಟಿ ಮೌಲ್ಯದ ಬಂಗಾರ-ಬೆಳ್ಳಿ ವಶ, ಇಬ್ಬರು ಅರೆಸ್ಟ್

# "ಅಂತರ್‌ಜಿಲ್ಲಾ ಕಳ್ಳರ ಗ್ಯಾಂಗ್‌ಗೆ ಬಿಗ್ ಶಾಕ್!"

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಧಾರವಾಡ ಹಾಗೂ ಹಾವೇರಿ ಜಿಲ್ಲಾ ಪೊಲೀಸರ ಭರ್ಜರಿ ಜಂಟಿ ಕಾರ್ಯಾಚರಣೆಯಲ್ಲಿ ಅಂತರ್‌ರಾಜ್ಯ ಕಳ್ಳರ ಜಾಲವನ್ನು ಭೇದಿಸಿ, ಸುಮಾರು ₹1 ಕೋಟಿ 15 ಲಕ್ಷ ಮೌಲ್ಯದ ಬಂಗಾರ, ಬೆಳ್ಳಿ ಆಭರಣಗಳು ಹಾಗೂ ಕಳ್ಳತನದ ವಾಹನವನ್ನು ವಶಪಡಿಸಿಕೊಳ್ಳಲಾಗಿದೆ.



ಹುಬ್ಬಳ್ಳಿ ಗ್ರಾಮೀಣ ಪೊಲೀಸ್ ಠಾಣಾ ವ್ಯಾಪ್ತಿಯ ಕಿರೇಸೂರ ಗ್ರಾಮದಲ್ಲಿ ಕಳೆದ ಎಪ್ರಿಲ್ ತಿಂಗಳಲ್ಲಿ ನಡೆದ ಮನೆ ಕಳ್ಳತನ ಹಾಗೂ ಹಾವೇರಿ ಜಿಲ್ಲೆಯ ಹಾನಗಲ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಎರಡು ದಿನಗಳ ಹಿಂದೆ ನಡೆದ ಬಂಗಾರದ ಅಂಗಡಿ ಕಳ್ಳತನ ಪ್ರಕರಣಗಳನ್ನು ಪೊಲೀಸರು ಭೇದಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಈ ಕುರಿತು ಮಾಹಿತಿ ನೀಡಿದ ಧಾರವಾಡ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ, ಪ್ರಕರಣಕ್ಕೆ ಸಂಬಂಧಿಸಿದಂತೆ ಗದಗ ಜಿಲ್ಲೆಯ ಲಕ್ಷ್ಮೇಶ್ವರ ತಾಲೂಕಿನ ಬಾಲೆಹೊಸೂರ ಗ್ರಾಮದ ಶಿವರಾಜ ಹನಮಂತಪ್ಪ ಮೋಡಕೇರ ಹಾಗೂ ಅಶೋಕ @ ರಮೇಶ್ ಶಿವಪ್ಪ ಕೊಂಚಿಕೊರವರ (ಅಂಬಾಮಠ, ಶಿಂದನೂರ ತಾಲೂಕು) ಅವರನ್ನು ಬಂಧಿಸಲಾಗಿದೆ ಎಂದು ತಿಳಿಸಿದ್ದಾರೆ.

ಆರೋಪಿಗಳಿಂದ 310 ಗ್ರಾಂ ಬಂಗಾರದ ಆಭರಣಗಳು, 26 ಕೆ.ಜಿ. ಬೆಳ್ಳಿಯ ಆಭರಣಗಳು ಹಾಗೂ ತೆಲಂಗಾಣ ರಾಜ್ಯದಲ್ಲಿ ಕಳವು ಮಾಡಿದ್ದ ಬುಲೆರೋ ವಾಹನವನ್ನು ವಶಪಡಿಸಿಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

> "ಜಿಲ್ಲೆಗಳ ನಡುವೆ ಸಮನ್ವಯದಿಂದ ಕಾರ್ಯಾಚರಣೆ ನಡೆಸಿದ ಪರಿಣಾಮ ದೊಡ್ಡ ಕಳ್ಳತನ ಜಾಲವನ್ನು ಭೇದಿಸಲು ಸಾಧ್ಯವಾಯಿತು."
> **– ಗುಂಜನ್ ಆರ್ಯ,** ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ

ಧಾರವಾಡ ಜಿಲ್ಲಾ ಪೊಲೀಸ್ ಅಧೀಕ್ಷಕ ಗುಂಜನ್ ಆರ್ಯ ಹಾಗೂ ಹಾವೇರಿ ಜಿಲ್ಲಾ ಪೊಲೀಸ್ ಅಧೀಕ್ಷಕಿ ಯಶೋದಾ ವಂಟಗೋಡಿ ಅವರ ಮಾರ್ಗದರ್ಶನದಲ್ಲಿ ಕಾರ್ಯಾಚರಣೆ ನಡೆಸಲಾಯಿತು.

ಧಾರವಾಡ ಜಿಲ್ಲಾ ಸೈಬರ್ ಕ್ರೈಂ ಪೊಲೀಸ್ ಠಾಣೆ, ಡಿವೈಎಸ್‌ಪಿ ಶಿವಾನಂದ ಕಟಗಿ, ಡಿವೈಎಸ್‌ಪಿ ವಿನೋದ ಮುಕ್ತಧಾರ ನೇತೃತ್ವದಲ್ಲಿ ಹುಬ್ಬಳ್ಳಿ ಗ್ರಾಮೀಣ ಠಾಣೆಯ ಇನ್ಸ್‌ಪೆಕ್ಟರ್ ಮುರುಗೇಶ ಚನ್ನಣ್ಣವರ, ನವಲಗುಂದ ಸಿಪಿಐ ರವಿ ಕಪ್ಪತ್ತನವರ, ಹಾನಗಲ್ ಸಿಪಿಐ ಬಸವರಾಜ ಹಳಬಣ್ಣವರ, ಪಿಎಸ್ಐ ಇಮ್ರಾನ್ ಪಠಾಣ ಸೇರಿದಂತೆ ವಿವಿಧ ಠಾಣೆಗಳ ಸಿಬ್ಬಂದಿ ಚುರುಕಿನ ಕಾರ್ಯಾಚರಣೆ ನಡೆಸಿದರು.

ಒಟ್ಟು ಆರು ಜನ ಆರೋಪಿತರ ತಂಡದಲ್ಲಿ ಇಬ್ಬರನ್ನು ಬಂಧಿಸಲಾಗಿದ್ದು, ಉಳಿದ ನಾಲ್ವರು ಆರೋಪಿತರ ಬಂಧನಕ್ಕಾಗಿ ಪೊಲೀಸರು ಬಲೆ ಬೀಸಿದ್ದಾರೆ.

ಪ್ರಕರಣವನ್ನು ಸಿನಿಮೀಯ ರೀತಿಯಲ್ಲಿ ಭೇದಿಸಿದ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಯ ಕಾರ್ಯವನ್ನು ಶ್ಲಾಘಿಸಿ ಸೂಕ್ತ ಬಹುಮಾನ ಘೋಷಿಸಲಾಗಿದೆ ಎಂದು ಎಸ್‌ಪಿ ಗುಂಜನ್ ಆರ್ಯ ತಿಳಿಸಿದ್ದಾರೆ.

## ಬೆಲೆ ಏರಿಕೆಯಿಂದ ಜನತೆ ತತ್ತರ..! ಮೋದಿ ರಾಜೀನಾಮೆ ನೀಡಲಿ: ಜಿ.ಡಿ. ಕಳಸಾಪೂರ

### "ದೇಶದ ಆರ್ಥಿಕ ಪರಿಸ್ಥಿತಿ ಪಾತಾಳಕ್ಕೆ ಇಳಿದಿದೆ" ಎಂದು ಕಾಂಗ್ರೆಸ್ ಮುಖಂಡರ ಆಕ್ರೋಶ



**■ವಿಜಯಸಾಕ್ಷಿ ಸುದ್ದಿ, ಗದಗ**

ದೇಶದಲ್ಲಿ ದಿನದಿಂದ ದಿನಕ್ಕೆ ಬೆಲೆ ಏರಿಕೆ ಹೆಚ್ಚುತ್ತಿದ್ದು, ಬಡವರು ಹಾಗೂ ಮಧ್ಯಮ ವರ್ಗದ ಜನರು ಸಂಕಷ್ಟದಲ್ಲಿದ್ದಾರೆ. ದೇಶದ ಆರ್ಥಿಕ ಪರಿಸ್ಥಿತಿ ಹದಗೆಟ್ಟಿರುವ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿಯವರು ರಾಜೀನಾಮೆ ನೀಡಬೇಕು ಎಂದು ಕಾಂಗ್ರೆಸ್ ಹಿರಿಯ ಮುಖಂಡ ಹಾಗೂ ಸಮಾಜಸೇವಕ ಜಿ.ಡಿ. ಕಳಸಾಪೂರ ಆಗ್ರಹಿಸಿದ್ದಾರೆ.

ಈ ಕುರಿತು ಶನಿವಾರ ಪತ್ರಿಕಾ ಪ್ರಕಟಣೆ ನೀಡಿರುವ ಅವರು, "ಭಾರತದ ಆರ್ಥಿಕ ಪರಿಸ್ಥಿತಿ ಪಾತಾಳಕ್ಕೆ ಇಳಿದಿದ್ದು, ಇದಕ್ಕೆ ನೇರ ಕಾರಣ ಕೇಂದ್ರ ಸರ್ಕಾರದ ವೈಫಲ್ಯ" ಎಂದು ಆರೋಪಿಸಿದರು.

ಆಟೋ ಚಾಲಕರು ಗ್ಯಾಸ್ ಸಿಲಿಂಡರ್‌ಗಳ ಬೆಲೆ ಏರಿಕೆಯಿಂದ ಸಂಕಷ್ಟ ಅನುಭವಿಸುತ್ತಿದ್ದರೂ ಕೇಂದ್ರ ಸರ್ಕಾರ ಮೌನವಾಗಿದೆ ಎಂದು ಟೀಕಿಸಿದರು.

ದೇಶದಲ್ಲಿ ಪೆಟ್ರೋಲ್, ಡೀಸೆಲ್, ಗ್ಯಾಸ್ ಸೇರಿದಂತೆ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಜನಸಾಮಾನ್ಯರ ಬದುಕು ದುಸ್ತರವಾಗಿದೆ. ಆದರೆ ಪ್ರಧಾನಿ ನರೇಂದ್ರ ಮೋದಿಯವರು ಜನರ ಸಮಸ್ಯೆಗಳನ್ನು ಮರೆತು ಕೇವಲ ಚುನಾವಣಾ ಪ್ರಚಾರದಲ್ಲಿ ತೊಡಗಿದ್ದಾರೆ ಎಂದು ದೂರಿದರು.

"ಪ್ರಧಾನಿ ಮೋದಿ ಇಸ್ರೇಲ್‌ಗೆ ಭೇಟಿ ನೀಡಿದ ಮರುದಿನ ಯುದ್ಧ ಆರಂಭವಾಗಿದೆ. ಇದರ ಬಗ್ಗೆ ಪ್ರಧಾನಿ ಸ್ಪಷ್ಟನೆ ನೀಡಬೇಕು" ಎಂದು ಪ್ರಶ್ನಿಸಿದರು.ದೇಶದ ಜನತೆ ಒಂದು ವರ್ಷ ಬಂಗಾರ ಖರೀದಿಸಬಾರದು ಎಂದು ಪ್ರಧಾನಿ ನೀಡಿರುವ ಹೇಳಿಕೆ ಜನರಲ್ಲಿ ಆತಂಕ ಮತ್ತು ಭಯ ಸೃಷ್ಟಿಸಿದೆ. ಇಂತಹ ಹೇಳಿಕೆಗಳು ಸರಿಯಲ್ಲ ಎಂದು ಕಳಸಾಪೂರ ಟೀಕಿಸಿದರು.

> "ಬೆಲೆ ಏರಿಕೆಯಿಂದ ದೇಶದ ಬಡವರು ಮತ್ತು ಮಧ್ಯಮ ವರ್ಗದ ಜನರು ಸಂಕಷ್ಟದಲ್ಲಿದ್ದಾರೆ. ಕೇಂದ್ರ ಸರ್ಕಾರ ಜನರ ಸಮಸ್ಯೆಗಳ ಬಗ್ಗೆ ಗಮನ ಹರಿಸಬೇಕು."
> – **ಜಿ.ಡಿ. ಕಳಸಾಪೂರ, ಕಾಂಗ್ರೆಸ್ ಹಿರಿಯ ಮುಖಂಡ**

## ಭಾಷೆ ಮಾತ್ರ ಸಾಲದು, ಸಾಹಿತ್ಯಕ್ಕೆ ರಾಜಕೀಯ ಪ್ರಜ್ಞೆ ಅಗತ್ಯ : ಡಾ. ರಂಗನಾಥ ಕಂಟನಕುಂಟೆ

# "ಪ್ರಜಾಸತ್ತೆ ನುಂಗಲು ಫ್ಯಾಸಿಸಂನ ಸಂಚು!"

**■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

"ಕಾವ್ಯ ಹಾಗೂ ಸಾಹಿತ್ಯಕ್ಕೆ ಕೇವಲ ಭಾಷೆ ಮಾತ್ರ ಮುಖ್ಯವಲ್ಲ. ರಾಜಕೀಯ ಪ್ರಜ್ಞೆ, ಗ್ರಹಿಕೆ ಮತ್ತು ಸಾಮಾಜಿಕ ಕಾಣಿಕೆ ಇಲ್ಲದ ಸಾಹಿತ್ಯ ವಿಚಾರಗಳನ್ನು ಹುಟ್ಟಿಸಲಾರದು. ಫ್ಯಾಸಿಸಂನ ಕರಾಳತೆ ಮತ್ತು ಆಕ್ರಮಣಶೀಲತೆಯ ಆಯಾಮಗಳನ್ನು ಹಿಡಿದಿಡುವ ಪಟ್ಟುಗಳನ್ನು ಕನ್ನಡದ ಕವಿಗಳು ಇನ್ನಷ್ಟು ಗಟ್ಟಿಗೊಳಿಸಬೇಕಾಗಿದೆ" ಎಂದು ಸಾಹಿತಿ ಹಾಗೂ ಪ್ರಾಧ್ಯಾಪಕ ಡಾ. ರಂಗನಾಥ ಕಂಟನಕುಂಟೆ ಅಭಿಪ್ರಾಯಪಟ್ಟರು.

ನಗರದ ಆರ್.ಎನ್. ಶೆಟ್ಟಿ ಕಲ್ಯಾಣ ಮಂಟಪದಲ್ಲಿ ನಡೆದ ಮೇ ಸಾಹಿತ್ಯ ಮೇಳದ "ಪ್ರಜಾಸತ್ತೆಯ ಮೇಲಿನ ದಾಳಿ: ಸೃಜನಶೀಲ ಸ್ಪಂದನೆ" ಗೋಷ್ಠಿಯಲ್ಲಿ ಅವರು ಮಾತನಾಡಿದರು.

ಪ್ರಸ್ತುತ ದೇಶದಲ್ಲಿ ಪ್ರಜಾಪ್ರಭುತ್ವ ವ್ಯವಸ್ಥೆಯ ಮೇಲಿನ ದಾಳಿಗಳು ತೀವ್ರಗೊಳ್ಳುತ್ತಿದ್ದು, ಸರ್ವಾಧಿಕಾರಿ ವ್ಯವಸ್ಥೆ ರೂಪುಗೊಳ್ಳುತ್ತಿರುವ ಸಂದರ್ಭದಲ್ಲಿ ಸಾಹಿತ್ಯ ಲೋಕ ಹೇಗೆ ಪ್ರತಿಕ್ರಿಯಿಸುತ್ತಿದೆ ಎಂಬುದು ಅತ್ಯಂತ ಮಹತ್ವದ್ದಾಗಿದೆ ಎಂದು ಅವರು ಹೇಳಿದರು.

ಮೇ ಸಾಹಿತ್ಯ ಮೇಳದಂತಹ ಸಾಹಿತ್ಯ ಪರಂಪರೆಗಳು ಕನ್ನಡದ ವಿವೇಕವನ್ನು ಜೀವಂತವಾಗಿಡುವ ಕೆಲಸ ಮಾಡುತ್ತಿವೆ. ಜನರನ್ನು ಎಚ್ಚರದಲ್ಲಿಡುವ ಜವಾಬ್ದಾರಿಯನ್ನು ಸಾಹಿತ್ಯ ಹೊತ್ತಿದೆ ಎಂದು ಅವರು ಅಭಿಪ್ರಾಯಪಟ್ಟರು.




ಗೋಷ್ಠಿಯಲ್ಲಿ ಮಾತನಾಡಿದ ಚಿಂತಕ ಶಿವಸುಂದರ್, "ಪ್ರಜಾಪ್ರಭುತ್ವ ಎಂದರೆ ಮನುಷ್ಯ ಮತ್ತು ಮನುಷ್ಯ ನಡುವಿನ ಸಂಬಂಧ. ಪ್ರಜಾಸತ್ತೆಯ ಮೇಲಿನ ದಾಳಿ ಎಂದರೆ ಅದು ಮನುಷ್ಯ ಸಂಬಂಧಗಳ ಮೇಲಿನ ದಾಳಿಯೇ ಆಗಿದೆ" ಎಂದು ಹೇಳಿದರು.

ಜನರ ಮನಸ್ಸಿನಲ್ಲಿ ಬುದ್ಧ, ಅಂಬೇಡ್ಕರ್ ಹಾಗೂ ಗಾಂಧೀಜಿಯವರ ವಿಚಾರಗಳನ್ನು ಕುಗ್ಗಿಸಿ, ಸಾವರ್ಕರ್ ಹಾಗೂ ಗೋಳ್ವಾಲ್ಕರ್ ಚಿಂತನೆಗಳನ್ನು ತುಂಬುವ ಪ್ರಯತ್ನಗಳು

> "ಭಾಷೆ ಮಾತ್ರ ಇದ್ದರೆ ಸಾಹಿತ್ಯ ಸಾಕಾಗುವುದಿಲ್ಲ; ರಾಜಕೀಯ ಪ್ರಜ್ಞೆ ಮತ್ತು ಸಾಮಾಜಿಕ ಗ್ರಹಿಕೆ ಇಲ್ಲದ ಸಾಹಿತ್ಯ ವಿಚಾರ ಹುಟ್ಟಿಸಲಾರದು."
> – **ಡಾ. ರಂಗನಾಥ ಕಂಟನಕುಂಟೆ, ಸಾಹಿತಿ**

ನಡೆಯುತ್ತಿವೆ ಎಂದು ಆರೋಪಿಸಿದ ಅವರು, "ಫ್ಯಾಸಿಸಂ ಎಂದರೆ ಬ್ರಾಹ್ಮಣ್ಯ ಮತ್ತು ಬಂಡವಾಳಶಾಹಿಯ ಒಕ್ಕೂಟ" ಎಂದು ಡಾ. ಬಾಬಾಸಾಹೇಬ್ ಅಂಬೇಡ್ಕರ್ ಬಹಳ ಹಿಂದೆಯೇ ಹೇಳಿದ್ದಾರೆ ಎಂದು

> "ಪ್ರಜಾಸತ್ತೆಯ ಮೇಲಿನ ದಾಳಿ ಎಂದರೆ ಅದು ಮನುಷ್ಯ ಸಂಬಂಧಗಳ ಮೇಲಿನ ದಾಳಿಯೇ ಆಗಿದೆ."
> – ಶಿವಸುಂದರ್, ಚಿಂತಕ

ಉಲ್ಲೇಖಿಸಿದರು.

ಕಳೆದ ನೂರು ವರ್ಷಗಳಿಂದ ಸಂಘಟಿತವಾಗಿ ಈ ಚಿಂತನೆಗಳನ್ನು ಪೋಷಿಸಲಾಗುತ್ತಿದ್ದು, ಜನರ ಮನೋಭಾವವನ್ನು ರೂಪಿಸುವ ಮಟ್ಟಕ್ಕೆ ಬೆಳೆಸಲಾಗಿದೆ ಎಂದು ಅವರು ವಿಶ್ಲೇಷಿಸಿದರು.

ಬಾಲಿವುಡ್‌ನಲ್ಲಿ ಫ್ಯಾಸಿಸ್ಟ್ ಚಿಂತನೆಗಳನ್ನು ಪೋಷಿಸುವ ಅನೇಕ ಸಿನಿಮಾಗಳು ನಿರ್ಮಾಣವಾಗುತ್ತಿವೆ. ಅವರಿಗೆ ಬಾಕ್ಸ್ ಆಫೀಸ್ ಯಶಸ್ಸಿಗಿಂತ ಜನರ ಮನಸ್ಸಿನಲ್ಲಿ ವಿಚಾರ ಬಿತ್ತುವುದೇ ಮುಖ್ಯ ಉದ್ದೇಶವಾಗಿದೆ ಎಂದು ಶಿವಸುಂದರ್ ಹೇಳಿದರು.

"ಐದು ವರ್ಷದ ಚುನಾವಣಾ ಅಧಿಕಾರವೇ ಅವರ ಗುರಿಯಲ್ಲ. ಸಮಾಜವನ್ನು ಶಾಶ್ವತವಾಗಿ ಆಳುವ ವ್ಯವಸ್ಥೆಯನ್ನು ನಿರ್ಮಿಸುವ ಉದ್ದೇಶ ಅವರದ್ದು" ಎಂದು ಅವರು ಆತಂಕ ವ್ಯಕ್ತಪಡಿಸಿದರು.

ಸಿಕಂದರ್ ಮೀರಾನಾಯಕ್, ಎಂ.ಎಂ. ಹೆಬ್ಬಾಳ ಹಾಗೂ ಡಿ.ಎಂ. ಬಡಿಗೇರ ವೇದಿಕೆಯಲ್ಲಿ ಉಪಸ್ಥಿತರಿದ್ದರು. ಡಾ. ರಾಮಚಂದ್ರ ಹಂಸನೂರ ಕಾರ್ಯಕ್ರಮ ಸಂಯೋಜಿಸಿದರು.

## ಕವಿಗಳು ಆತ್ಮಪ್ರಶ್ನೆಯೊಂದಿಗೆ ಬರೆಯಲಿ : ಉರ್ದು ಲೇಖಕಿ ನಿಶತ್ ಜಮೀಲಾ ಕರೆ

# "ಕಲ್ಪನೆಯೇ ಸತ್ಯದ ಕನ್ನಡಿ"

**■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

"ಕವಿಗಳು 'ನಾನು ಏಕೆ ಬರೆಯುತ್ತಿದ್ದೇನೆ?' ಎಂಬ ಆತ್ಮಪ್ರಶ್ನೆಯನ್ನು ಸದಾ ಮುಂದಿಟ್ಟುಕೊಂಡೇ ಬರೆಯಬೇಕು. ಕಲ್ಪನೆಯ ಮೂಲಕವೇ ಸತ್ಯವನ್ನು ಹೊರಹಾಕಬೇಕು" ಎಂದು ಹೈದರಾಬಾದ್‌ನ ಉರ್ದು ಲೇಖಕಿ ಹಾಗೂ ಹೋರಾಟಗಾರ್ತಿ ನಿಶತ್ ಜಮೀಲಾ ಹೇಳಿದರು.

ಹನ್ನೆರಡನೇ ಮೇ ಸಾಹಿತ್ಯ ಮೇಳದ ಎರಡನೇ ದಿನ ನಡೆದ ಕವಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬರವಣಿಗೆ ಜೀವನದ ಅರ್ಥವನ್ನು ಹುಡುಕುವ ಮಹತ್ವದ ಅಭಿವ್ಯಕ್ತಿ ಮಾರ್ಗವಾಗಿದೆ ಎಂದು ಅಭಿಪ್ರಾಯಪಟ್ಟರು.

ಅನೇಕ ಪ್ರಸಿದ್ಧ ಕವಿಗಳ ಕವನಗಳನ್ನು ಓದಿರುವ ಅನುಭವ ಹಂಚಿಕೊಂಡ ನಿಶತ್ ಜಮೀಲಾ, "ಕಲ್ಪನೆ



ಸತ್ಯವನ್ನು ಹೊರಹಾಕುತ್ತದೆ. ಅದು ಕೇವಲ ಫ್ಯಾಂಟಸಿ ಅಲ್ಲ, ವಾಸ್ತವದ ಒಂದು ಭಾಗ" ಎಂದು ಹೇಳಿದರು.

ಸಮಾಜದಲ್ಲಿ ಶಾಂತಿ ಇದ್ದರೂ ಸಂತೋಷದ ಕೊರತೆ ಕಾಣುತ್ತಿರುವುದರ ಬಗ್ಗೆ ಚಿಂತನೆ ಅಗತ್ಯವಿದೆ ಎಂದ ಅವರು, ಸಾಹಿತ್ಯವು ಸಮಾಜದ ನೋವು, ಅಸಮಾನತೆ ಹಾಗೂ ಹಿಂಸೆಯ ವಿರುದ್ಧ ಧ್ವನಿಯಾಗಬೇಕು ಎಂದು ತಿಳಿಸಿದರು.

ತಾವು ಮಹಿಳೆಯರೊಂದಿಗೆ ಕಾರ್ಯನಿರ್ವಹಿಸಲು ಒಂದು ಸಂಸ್ಥೆ ಆರಂಭಿಸಿರುವುದಾಗಿ ತಿಳಿಸಿದ ಅವರು, ಹೈದರಾಬಾದ್‌ನಲ್ಲಿ ನಡೆಯುತ್ತಿರುವ ಕೋಮು ಸಂಘರ್ಷಗಳು ಹಾಗೂ ಮಹಿಳೆಯರ ಮೇಲಿನ ದಬ್ಬಾಳಿಕೆಯನ್ನು ನೇರವಾಗಿ ಅನುಭವಿಸಿದ್ದಾಗಿ ಹೇಳಿದರು. ಮಹಿಳೆಯರ ನೋವು, ಕೌಟುಂಬಿಕ ಹಿಂಸೆ ಹಾಗೂ ಸಾಮಾಜಿಕ ದಬ್ಬಾಳಿಕೆಯನ್ನು ಕವ್ವಾಲಿಗಳ ಮೂಲಕ ವ್ಯಕ್ತಪಡಿಸಲಾಗುತ್ತಿದೆ ಎಂದು ಹೇಳಿದರು.

ಹಿಂಸಾಚಾರದ ವಿರುದ್ಧ ಮಹಿಳೆಯರು ಕವ್ವಾಲಿಗಳನ್ನು ಹಾಡಲು ಆರಂಭಿಸಿರುವುದು ಹೊಸ ಸಾಮಾಜಿಕ ಜಾಗೃತಿಯ ಸಂಕೇತ ಎಂದು ಅವರು ಅಭಿಪ್ರಾಯಪಟ್ಟರು. "ಯಾರಾದರೂ ಅನುಭವಿಸಿದ ನೋವನ್ನೇ ಅನುಭವಿಸದೇ ಬರೆಯಬಹುದು. ಆದರೆ ಕಲ್ಪನೆ ಬಹಳ ಮುಖ್ಯ" ಎಂದು ಹೇಳಿದರು.

1997ರಲ್ಲಿ ಬುರ್ಖಾ ವಿರೋಧಿಸಿ ಕವನ ಬರೆದಾಗ ತೀವ್ರ ವಿರೋಧ ಎದುರಿಸಿದ್ದನ್ನು ಸ್ಮರಿಸಿದ ಅವರು, "ಕಾವ್ಯ ಮತ್ತು ಸಾಂಸ್ಕೃತಿಕ ಅನುವಾದವು ಮಾತಿಲ್ಲದವರ ನೋವನ್ನು ಹೊರಹಾಕುವ ಶಕ್ತಿಶಾಲಿ ಸಾಧನಗಳು" ಎಂದು ಹೇಳಿದರು.

ಮಹಿಳೆಯರು ಶಿಕ್ಷಣ ಹಾಗೂ ತಂತ್ರಜ್ಞಾನ ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದ ಅವರು, ಬುರ್ಖಾ ಪದ್ಧತಿಯ ಬಗ್ಗೆ ಟೀಕಾತ್ಮಕವಾಗಿ ಮಾತನಾಡಿ, ಮಹಿಳೆಯರು ಸ್ವಾವಲಂಬಿಗಳಾಗಬೇಕಾದ ಅಗತ್ಯವಿದೆ ಎಂದು ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕೆ.ವೈ. ನಾರಾಯಣಸ್ವಾಮಿ, "ಇಂದಿನ ಕವಿಗಳ ಕಾವ್ಯ ವಸ್ತು ಹಾಗೂ ಅನುಭವ ಆಳವಾಗಿದೆ. ಆದರೆ ಕಾಲಭಾಷೆಯ ಸ್ಪಷ್ಟತೆ ಕಾಣುತ್ತಿಲ್ಲ. ಬಸವಣ್ಣ, ಸರ್ವಜ್ಞರಂತಹ ನೆಲಮೂಲ ಕವಿಗಳ ಅಧ್ಯಯನ ಅಗತ್ಯ" ಎಂದು ಅಭಿಪ್ರಾಯಪಟ್ಟರು.

ಹೈದರಾಬಾದ್‌ನ ತೆಲುಗು ಕವಯತ್ರಿ ಮರ್ಸಿ ಮಾರ್ಗರೇಟ್, ಆರನಕಟ್ಟೆ ರಂಗನಾಥ, ದೀಪಾ ಗೋನಾಳ, ಸೂರ್ಯಕೀರ್ತಿ, ಬಿ.ವಿ. ಸುನಿತಾ, ಕೆ.ಬಿ. ವೀರಲಿಂಗನಗೌಡ್ರ, ಜಬೀವುಲ್ಲಾ ಅಸಾದ್, ನಾಗರಾಜ ಹರಪನಹಳ್ಳಿ, ಶಮೀಮ ಕುತ್ತಾರ್ ಕಾಸರಗೋಡು, ಸಿ.ಬಿ. ಐನಳ್ಳಿ, ಸದಾಶಿವ ಸೊರಟೂರು, ಎಂ.ಎಂ. ಮುಲ್ತಾನಿ, ಅಶೋಕ ಹೊಸಮನಿ, ಶಿಲ್ಪಾ ಮ್ಯಾಗೇರಿ, ಮಧು ಕಾರಗಿ ಸೇರಿದಂತೆ ಹಲವರು ಕವನ ವಾಚಿಸಿದರು.

> "ಬುರ್ಖಾವನ್ನು ತೆಗೆದು ಕಂಪ್ಯೂಟರ್ ಕಲಿಯುವ ಮೂಲಕ ಮಹಿಳೆಯರು ಸ್ವಾವಲಂಬಿಗಳಾಗಬೇಕು."
> – **ನಿಶತ್ ಜಮೀಲಾ, ಉರ್ದು ಲೇಖಕಿ**

# ಗದಗನಲ್ಲಿ ಶನಿ ಅಮಾವಾಸ್ಯೆ ಸಂಭ್ರಮ



**■ವಿಜಯಸಾಕ್ಷಿ ಸುದ್ದಿ, ಗದಗ**

13 ವರ್ಷಗಳ ಬಳಿಕ ಶನಿವಾರದಂದು ಶನಿ ಅಮಾವಾಸ್ಯೆ ಸಂಯೋಗದಲ್ಲಿ ಬಂದ ಶನಿದೇವರ ಜಯಂತಿ ಅಂಗವಾಗಿ ಗದಗ ಜಿಲ್ಲಾ ವಿಕಾಸ ವೇದಿಕೆಯ ವತಿಯಿಂದ ನಗರದ ರೈಲ್ವೆ ನಿಲ್ದಾಣದ ಸಮೀಪದ ಶ್ರೀ ಮಾರುತಿ ಮಂದಿರ ಹಾಗೂ ಶ್ರೀ ಶನೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ ಹಾಗೂ ಧಾರ್ಮಿಕ ಕಾರ್ಯಕ್ರಮಗಳು ಶನಿವಾರ ಭಕ್ತಿಭಾವದಿಂದ ನೆರವೇರಿದವು.

ಶ್ರೇಷ್ಠ ಮಾಸದ ಅಮಾವಾಸ್ಯೆಯಂದು ಆಚರಿಸಲ್ಪಡುವ ಶನಿದೇವರ ಜಯಂತಿ ಈ ಬಾರಿ ಶನಿವಾರದಂದೇ ಬಂದಿರುವುದು ಅಪರೂಪದ ಹಾಗೂ ವಿಶೇಷ ಸಂಯೋಗ ಎಂದು ಭಕ್ತರು ಅಭಿಪ್ರಾಯಪಟ್ಟರು.

ಗದಗ ಜಿಲ್ಲಾ ವಿಕಾಸ ವೇದಿಕೆ ಅಧ್ಯಕ್ಷ ವಿಶ್ವನಾಥ ಖಾನಾಪೂರ ನೇತೃತ್ವದಲ್ಲಿ ನಡೆದ ಪೂಜಾ ಕಾರ್ಯಕ್ರಮದಲ್ಲಿ ಬಸವರಾಜ ಜರತಕನ್ನಿ, ಪ್ರಲ್ಹಾದ ಮಾಂಡ್ರೆ, ನಗರಸಭೆ ಮಾಜಿ ಸದಸ್ಯ ಎಂ.ಎಸ್. ಪರ್ವತಗೌಡ್ರ, ವೆಂಕಟೇಶ ಕಬಾಡಿ ಸೇರಿದಂತೆ ಹಲವರು ಭಾಗವಹಿಸಿ ರಾಜ್ಯದಲ್ಲಿ ಉತ್ತಮ ಮಳೆ-ಬೆಳೆ ಆಗಲಿ, ಜನತೆಗೆ ಆರೋಗ್ಯ ಮತ್ತು ಸಮೃದ್ಧಿ ದೊರಕಲಿ ಎಂದು ಪ್ರಾರ್ಥಿಸಿದರು.

ಭಕ್ತರು ಶನೇಶ್ವರ ದೇವರಿಗೆ ವಿಶೇಷ ಪೂಜೆ ಸಲ್ಲಿಸಿ ಎಳ್ಳು-ಎಣ್ಣೆ ಅಭಿಷೇಕ, ಆರತಿ ಹಾಗೂ ಪ್ರಾರ್ಥನೆ ನಡೆಸಿದರು. ದೇವಸ್ಥಾನದಲ್ಲಿ ಭಕ್ತರ ದಟ್ಟಣೆ ಕಂಡು ಬಂತು.

# ವಿಶೇಷ ಚೇತನರ ಬದುಕಿಗೆ ಧರ್ಮಸ್ಥಳ ಆಸರೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಡಿ ಜಾರಿಗೆ ಬಂದಿರುವ 'ಜನಮಂಗಳ' ಕಾರ್ಯಕ್ರಮವು ವಿಕಲಚೇತನರು ಹಾಗೂ ವಿಶೇಷ ಚೇತನರ ಸಬಲೀಕರಣ ಮತ್ತು ಕಲ್ಯಾಣಕ್ಕಾಗಿ ರೂಪಿಸಲಾದ ಮಹತ್ವಾಕಾಂಕ್ಷಿ ಯೋಜನೆಯಾಗಿದೆ ಎಂದು ಶಿರಹಟ್ಟಿ-ಲಕ್ಷ್ಮೇಶ್ವರ ತಾಲೂಕಿನ ಯೋಜನಾಧಿಕಾರಿ ಪುನೀತ ಓಲೇಕಾರ ಹೇಳಿದರು.

ತಾಲೂಕಿನ ಬಡ್ನಿ ಗ್ರಾಮದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವತಿಯಿಂದ ಜನಮಂಗಳ ಕಾರ್ಯಕ್ರಮದಡಿ ಪೂಜ್ಯ ಡಾ. ಡಿ. ವೀರೇಂದ್ರ ಹೆಗ್ಗಡೆ ಅವರು ಮಂಜೂರು ಮಾಡಿದ ಔಟ್‌ಸೈಡ್ ವೀಲ್‌ಚೇರ್ ಅನ್ನು ರವಿ ಯಲವಗಿ ಅವರಿಗೆ ವಿತರಿಸಿ ಅವರು ಮಾತನಾಡಿದರು.

ಶಿಕ್ಷಿತ ಹಾಗೂ ಆರೋಗ್ಯಕರ ಸಮಾಜ ನಿರ್ಮಾಣ, ಸಾಮಾನ್ಯರ ಜೀವನಮಟ್ಟ



ಸುಧಾರಣೆ, ಮಹಿಳೆಯರ ಸಬಲೀಕರಣ ಮತ್ತು ಸ್ವಾವಲಂಬನೆಗೆ ಧರ್ಮಸ್ಥಳ ಸಂಸ್ಥೆ ನಿರಂತರವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದರು.

ಆರ್ಥಿಕವಾಗಿ ಹಿಂದುಳಿದ ಮತ್ತು ದುರ್ಬಲ ವರ್ಗದ ಜನರ ಏಳಿಗೆಗಾಗಿ ಸಮುದಾಯ ಅಭಿವೃದ್ಧಿ, ಸುಜ್ಞಾನನಿಧಿ ಶಿಷ್ಯವೇತನ, ಶಾಲೆಗಳಿಗೆ ಪೀಠೋಪಕರಣ ವಿತರಣೆ, ದೇವಸ್ಥಾನ ಜೀರ್ಣೋದ್ಧಾರ, ಮದ್ಯವರ್ಜನ ಶಿಬಿರ, ಕೆರೆಗಳ ಹೂಳೆತ್ತುವಿಕೆ, ಶ್ರದ್ಧಾ ಕೇಂದ್ರ ಸ್ವಚ್ಛತೆ ಹಾಗೂ ಮಾಸಾಶನ ಸೇರಿದಂತೆ ಹಲವು ಯೋಜನೆಗಳನ್ನು ಜಾರಿಗೊಳಿಸಲಾಗುತ್ತಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಶಿವಾನಂದ ಅಗಸಿಬಾಗಿಲ, ವಲಯ ಮೇಲ್ವಿಚಾರಕ ನಿಂಗಪ್ಪ ಪಾಟೀಲ, ಒಕ್ಕೂಟದ ಪದಾಧಿಕಾರಿಗಳು, ಸೇವಾ ಪ್ರತಿನಿಧಿಗಳು ಹಾಗೂ ಯಲವಗಿ ಕುಟುಂಬದವರು ಉಪಸ್ಥಿತರಿದ್ದರು.

## ಎಸಐಆರ್ ರದ್ದುಗೊಳಿಸುವಂತೆ ಮೇ ಸಾಹಿತ್ಯ ಮೇಳದಲ್ಲಿ ನಡೆದ ಪ್ರತಿಭಟನಾ ಜಾಥಾದಲ್ಲಿ ಸವಿತಾ ಬನ್ನಾಡಿ ಆಕ್ರೋಶ

# "ಸಂವಿಧಾನ ಉಳಿಸಿ ಎಸಐಆರ್ ರದ್ದುಪಡಿಸಿ!"

**■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

"ಸತ್ತಿರುವವರನ್ನು ಮತದಾರರ ಪಟ್ಟಿಯಿಂದ ತೆಗೆಯಬೇಕಿತ್ತು. ಆದರೆ ಬದುಕಿರುವ ಜನರನ್ನೇ ಮತದಾರರ ಪಟ್ಟಿಯಿಂದ ತೆಗೆದುಹಾಕಲಾಗಿದೆ. ಇದು ಜನಾಂಗ ಹತ್ಯೆಗೆ ಸಮಾನ. ಬದುಕಿರುವವರನ್ನೇ ಸತ್ತವರಂತೆ ಮಾಡುವುದೇ ಎಸಐಆರ್. ಇದನ್ನು ನಾವೆಲ್ಲರೂ ಒಗ್ಗಟ್ಟಾಗಿ ವಿರೋಧಿಸಬೇಕು" ಎಂದು ಸಾಮಾಜಿಕ ಹೋರಾಟಗಾರ್ತಿ ಸವಿತಾ ಬನ್ನಾಡಿ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಹುಬ್ಬಳ್ಳಿಯಲ್ಲಿ ನಡೆದ ಮೇ ಸಾಹಿತ್ಯ ಮೇಳದ ಎರಡನೇ ದಿನ ಎಸಐಆರ್




ರದ್ದುಗೊಳಿಸುವಂತೆ ಬೃಹತ್ ಪ್ರತಿಭಟನಾ ಜಾಥಾ ನಡೆಯಿತು. ಹಿರಿಯ ಕಾದಂಬರಿಕಾರ ಕುಂ. ವೀರಭದ್ರಪ್ಪ (ಕುಂವೀ) ಅವರು ಚೆನ್ನಮ್ಮ ವೃತ್ತದಿಂದ ಆರ್.ಎನ್. ಶೆಟ್ಟಿ ಕಲ್ಯಾಣ ಮಂಟಪದವರೆಗೆ ನಡೆದ ಜಾಥಾಗೆ ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಚಿಂತಕ ಡಾ. ಅಶೋಕ ಶೆಟ್ಟರ್, "ಭಾರತದಲ್ಲಿ ಸಂವಿಧಾನದ ಮೇಲೆಯೇ ದಾಳಿ ನಡೆಯುತ್ತಿದೆ. ಎಸಐಆರ್ ಎಂಬ ಹೆಸರಿನಲ್ಲಿ ಕೋಟ್ಯಾಂತರ ಜನರನ್ನು ಚುನಾವಣಾ ಪ್ರಕ್ರಿಯೆಯಿಂದ ಹೊರಗಿಡುವ ಯತ್ನ ನಡೆಯುತ್ತಿದೆ. ಕರ್ನಾಟಕದಲ್ಲೂ ಇದನ್ನು ಜಾರಿಗೊಳಿಸಲು ಅವಕಾಶ ನೀಡಬಾರದು" ಎಂದು ಎಚ್ಚರಿಸಿದರು.

ಹೋರಾಟಗಾರ ರಂಜಾನ್ ದರ್ಗಾ ಮಾತನಾಡಿ, "ಸಂವಿಧಾನ ವಿರೋಧಿ ಕ್ರಮಗಳ ಮೂಲಕ ಬಡವರು, ಓಬಿಸಿ ಹಾಗೂ ಹಿಂದುಳಿದ ವರ್ಗಗಳನ್ನು ಚುನಾವಣಾ ವ್ಯವಸ್ಥೆಯಿಂದ ಹೊರ ತಳ್ಳಲಾಗುತ್ತಿದೆ. ಪಶ್ಚಿಮ ಬಂಗಾಳದಲ್ಲಿ ಎಸಐಆರ್ ಮೂಲಕ ಲಕ್ಷಾಂತರ ಜನರನ್ನು ಮತದಾನದ ಹಕ್ಕಿನಿಂದ ವಂಚಿಸಲಾಗಿದೆ. ಕರ್ನಾಟಕದಲ್ಲಿ ಇದನ್ನು ಜಾರಿಗೊಳಿಸದಂತೆ ಸಾಹಿತ್ಯ ಮೇಳವೇ ಹೋರಾಟದ ವೇದಿಕೆಯಾಗಬೇಕು" ಎಂದು ಕರೆ ನೀಡಿದರು.

ಪ್ರತಿಭಟನಾ ಜಾಥಾದಲ್ಲಿ ಮೂಡ್ನಾಕೂಡ ಚಿನ್ನಸ್ವಾಮಿ, ಶ್ರೀಪಾದ್ ಭಟ್ ಸೇರಿದಂತೆ ನೂರಾರು ಸಾಹಿತ್ಯಾಸಕ್ತರು, ಹೋರಾಟಗಾರರು ಹಾಗೂ ವಿವಿಧ ಸಂಘಟನೆಗಳ ಮುಖಂಡರು ಭಾಗವಹಿಸಿದ್ದರು.

> "ಎಸಐಆರ್ ಹೆಸರಿನಲ್ಲಿ ಜನರನ್ನು ಚುನಾವಣಾ ಪ್ರಕ್ರಿಯೆಯಿಂದ ಹೊರಗಿಡುವ ಯತ್ನ ನಡೆಯುತ್ತಿದೆ."
> – **ಡಾ. ಅಶೋಕ ಶೆಟ್ಟರ್, ಸಾಹಿತಿ**

# "ಗದಗದಲ್ಲಿ ಹಿಂದೂ ಶಕ್ತಿಯ ಮಹಾಸಂಗಮ!"

▶▶ ಮೊದಲನೇ ಪುಟದಿಂದ

ಕಳೆದ 10ರಿಂದ 15 ವರ್ಷಗಳಿಂದ ಹಿಂದೂ ಸಮಾಜವನ್ನು ಒಡೆಯುವ ವ್ಯವಸ್ಥಿತ ಪ್ರಯತ್ನಗಳು ನಡೆಯುತ್ತಿವೆ ಎಂದು ಆರೋಪಿಸಿದ ರಾಜು ಖಾನಪ್ಪನವರ, "ಹಿಂದೂ ಧರ್ಮದ ಮಠಾಧೀಶರನ್ನೇ ಬಳಸಿಕೊಂಡು ಸಮಾಜದಲ್ಲಿ ಒಡಕು ಮೂಡಿಸುವ ಹಾಗೂ ಹಿಂದೂ ದೇವತೆಗಳನ್ನು ಅವಹೇಳನ ಮಾಡುವ ಕೆಲಸ ನಡೆಯುತ್ತಿದೆ. ಈ ಸಮಾವೇಶದ ಮೂಲಕ ಅಂತಹ ಹಿಂದೂ ವಿರೋಧಿ ಶಕ್ತಿಗಳಿಗೆ ತಕ್ಕ ಉತ್ತರ ನೀಡಲಾಗುವುದು" ಎಂದು ಎಚ್ಚರಿಕೆ ನೀಡಿದರು.

ಈ ಸಮಾವೇಶದಲ್ಲಿ 25 ಸಾವಿರಕ್ಕೂ ಹೆಚ್ಚು ಜನರು ಭಾಗವಹಿಸುವ ನಿರೀಕ್ಷೆಯಿದೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ವಸಂತ ಗೌಡ ಪೊಲೀಸಪಾಟೀಲ, ರುದ್ರಣ್ಣ ಗುಳಗುಳಿ, ರಾಜು ಕುರುಡಗಿ, ಜಗದೀಶ ಪೂಜಾರ, ಅರವಿಂದ ಹುಲ್ಲೂರ, ವೆಂಕಟೇಶ ಕುಲಕರ್ಣಿ, ವಿಜಯಲಕ್ಷ್ಮೀ ಮಾನ್ವಿ, ಪ್ರೀತಿ ಹೊನ್ನಗುಡಿ ಸೇರಿದಂತೆ ವಿವಿಧ ಸಮಾಜಗಳ ಮುಖಂಡರು ಉಪಸ್ಥಿತರಿದ್ದರು.

# "ಒಳಮೀಸಲಾತಿ ಹೆಸರಿನಲ್ಲಿ ಮಾದಿಗ ಸಮುದಾಯಕ್ಕೆ ಅನ್ಯಾಯ!"

▶▶ ಮೊದಲನೇ ಪುಟದಿಂದ

ಭೋವಿ ಹಾಗೂ ಹೊಲೆಯ ಸಮುದಾಯಗಳು ಮಾದಿಗರಿಗಿಂತ ಆರ್ಥಿಕ ಮತ್ತು ಸಾಮಾಜಿಕವಾಗಿ ಹೆಚ್ಚು ಬಲಿಷ್ಠವಾಗಿವೆ. ಆದರೆ ಮಾದಿಗ ಸಮುದಾಯಕ್ಕೆ ನ್ಯಾಯ ಸಿಗದಂತೆ ಕುತಂತ್ರ ರೂಪಿಸಲಾಗಿದೆ ಎಂದು ಆರೋಪಿಸಿದರು. ಕಾಂಗ್ರೆಸ್ ಸರ್ಕಾರ ಒಳಮೀಸಲಾತಿ ಜಾರಿಗೊಳಿಸುವಲ್ಲಿ ಕನಿಷ್ಠ ಶೇ. 1ರಷ್ಟು ಕೆಲಸವೂ ಮಾಡಿಲ್ಲ ಎಂದು ಟೀಕಿಸಿದ ಅವರು, 2026ರ ಫೆಬ್ರವರಿ 27ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ 56,432 ಹುದ್ದೆಗಳಿಗೆ ಒಳಮೀಸಲಾತಿ ಅನ್ವಯಿಸುವುದಿಲ್ಲ ಎಂಬ ದ್ರೋಹದ ನಿರ್ಧಾರ ಕೈಗೊಳ್ಳಲಾಗಿತ್ತು ಎಂದು ಹೇಳಿದರು. ಈ ನಿರ್ಧಾರದ ವಿರುದ್ಧ ರಾಜ್ಯಾದ್ಯಂತ ತೀವ್ರ ಹೋರಾಟ ಆರಂಭವಾದ ಬಳಿಕ ಸರ್ಕಾರ ಮರು ಪರಿಶೀಲನೆ ಮಾಡುವುದಾಗಿ ಹೇಳಿ, ನಂತರ ಶೇ. 5.25ರಷ್ಟು ಒಳಮೀಸಲಾತಿ ಘೋಷಿಸಿತು ಎಂದು ವಿವರಿಸಿದರು. ಪ್ರಸ್ತುತ ಜಾರಿಯಲ್ಲಿರುವ ಒಳಮೀಸಲಾತಿ ಸರ್ಕಾರದ ಉದಾರ ಮನೋಭಾವದಿಂದ ಬಂದದ್ದಲ್ಲ, ಅದು ಮಾದಿಗ ಸಮುದಾಯದ ದೀರ್ಘ ಹೋರಾಟದ ಫಲ ಎಂದು ಅವರು ಸ್ಪಷ್ಟಪಡಿಸಿದರು. ಸುದ್ದಿಗೋಷ್ಠಿಯಲ್ಲಿ ಮಾಳಪ್ಪ ಕುರ್ಕಿ, ವೈ. ಜಯರಾಜ್, ಸುರೇಂದ್ರ, ರಾಮಚಂದ್ರ ಭುಡಾರಿ, ಪ್ರೇಮಾ ದೇವರಾಜ, ಪ್ರೇಮಾ ಕಲಕೇರಿ ಹಾಗೂ ಬಸವರಾಜ ಹೊಸಮನಿ ಉಪಸ್ಥಿತರಿದ್ದರು.

### ಅಂಬೇಡ್ಕರ್-ಬಾಬು ಜಗಜೀವನ್ ರಾಮ್ ಜಯಂತ್ಯುತ್ಸವದಲ್ಲಿ ಶಾಸಕ ಜಿ.ಎಸ್. ಪಾಟೀಲ

# "ಸಂವಿಧಾನಕ್ಕೆ ಧಕ್ಕೆ ತಂದರೆ ಕ್ಷಮೆ ಇಲ್ಲ!"

■ ವಿಜಯಸಾಕ್ಷಿ ಸುದ್ದಿ, ನರೇಗಲ

"ಭಾರತದ ಸಂವಿಧಾನ ದೇಶದ ಪ್ರತಿಯೊಬ್ಬ ಪ್ರಜೆಯ ಹಕ್ಕು, ಸ್ವಾತಂತ್ರ್ಯ ಮತ್ತು ಸಮಾನತೆಯ ಜೀವನಾಡಿ. ಸಂವಿಧಾನದ ತಂಟೆಗೆ ಬರುವವರಿಗೆ ಜನರೇ ತಕ್ಕ ಉತ್ತರ ನೀಡುತ್ತಾರೆ" ಎಂದು ರೋಣ ಶಾಸಕ ಜಿ.ಎಸ್. ಪಾಟೀಲ ಎಚ್ಚರಿಕೆ ನೀಡಿದರು.

ಜೈ ಭೀಮ ಸೇನಾ ರಾಜ್ಯ ಸಂಘರ್ಷ ಸಮಿತಿ, ಡಾ. ಬಿ.ಆರ್. ಅಂಬೇಡ್ಕರ್ ಅಭಿಮಾನಿ ಬಳಗ ಹಾಗೂ ಜಿ.ಎಸ್. ಪಾಟೀಲ ಅಭಿಮಾನಿ ಬಳಗದ ವತಿಯಿಂದ ನರೇಗಲ್ಲ ಪಟ್ಟಣದಲ್ಲಿ ಆಯೋಜಿಸಿದ್ದ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಹಾಗೂ ಡಾ. ಬಾಬು ಜಗಜೀವನ್ ರಾಮ್ ಅವರ 119ನೇ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ದೇಶದ ಸಂವಿಧಾನವನ್ನು ಬದಲಿಸುವ ಕುರಿತು ಕೆಲವರು ಮಾತನಾಡುತ್ತಿರುವುದು ಆತಂಕಕಾರಿ ಬೆಳವಣಿಗೆ ಎಂದು ಹೇಳಿದ ಅವರು, "ಏಳು ದಶಕಗಳಿಂದ ದೇಶ ಸಂವಿಧಾನದ ಆಶಯದಂತೆ ಬದುಕುತ್ತಿದೆ. ಮುಂದಿನ ಪೀಳಿಗೆಯೂ ಅದನ್ನು ಕಾಪಾಡುವ ಹೊಣೆ ಹೊತ್ತುಕೊಳ್ಳಬೇಕು" ಎಂದು ಹೇಳಿದರು.

ದಲಿತರು, ಹಿಂದುಳಿದವರು ಎನ್ನುವ ಬದಲು ಎಲ್ಲರೂ ಸಮಾನರು ಎಂಬ ಮನೋಭಾವ ಸಮಾಜದಲ್ಲಿ ಬೆಳೆಬೇಕು. ಡಾ. ಬಾಬಾಸಾಹೇಬ್ ಅಂಬೇಡ್ಕರ್ ರಚಿಸಿದ ಸಂವಿಧಾನದಿಂದಲೇ ದೇಶದಲ್ಲಿ ಸಮಾನತೆ ಹಾಗೂ ಸಹಬಾಳ್ವೆ ಸಾಧ್ಯವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.



ಜೈ ಭೀಮ ಸೇನಾ ರಾಜ್ಯ ಸಂಘರ್ಷ ಸಮಿತಿಯ ರಾಜ್ಯ ಉಪಾಧ್ಯಕ್ಷ ಹಾಗೂ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷರಾಗಿರುವ ಮೈಲಾರಪ್ಪ ವಿ. ಚಳ್ಳಮರದ ಅವರ ಸಂಘಟನಾ ಶಕ್ತಿಯನ್ನು ಶಾಸಕ ಜಿ.ಎಸ್. ಪಾಟೀಲ ಶ್ಲಾಘಿಸಿದರು.

"ಮೈಲಾರಪ್ಪ ಕಾಂಗ್ರೆಸ್ ಪಕ್ಷಕ್ಕೆ ಬಂದ ಬಳಿಕ ಮತ್ತಷ್ಟು ಚುರುಕುಗೊಂಡಿದ್ದಾರೆ. ಮುಂದಿನ ದಿನಗಳಲ್ಲಿ ಪಕ್ಷದಲ್ಲಿ ಉನ್ನತ ಹುದ್ದೆಗಳನ್ನು ಅಲಂಕರಿಸಲಿದ್ದಾರೆ" ಎಂದು ಭರವಸೆ ನೀಡಿದರು.

ರೋಣ ತಾಲ್ಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಮಿಥುನ್ ಜಿ. ಪಾಟೀಲ, "ಸಂವಿಧಾನವೇ ಪರಿಶಿಷ್ಟ ಜಾತಿ, ಪಂಗಡ, ಅಲ್ಪಸಂಖ್ಯಾತರು ಹಾಗೂ ಮಹಿಳೆಯರಿಗೆ ಸಮಾನ ಬದುಕಿನ ಹಕ್ಕು ನೀಡಿದೆ" ಎಂದು ಹೇಳಿದರು.

> "ಸಂವಿಧಾನದ ತಂಟೆಗೆ ಬರುವವರಿಗೆ ಜನರೇ ತಕ್ಕ ಉತ್ತರ ನೀಡುತ್ತಾರೆ. "ಸಮಾನತೆ ಮತ್ತು ಸಹಬಾಳ್ವೆಗೆ ಡಾ. ಅಂಬೇಡ್ಕರ್ ನೀಡಿದ ಸಂವಿಧಾನವೇ ಬಲ."
> – **ಜಿ.ಎಸ್. ಪಾಟೀಲ, ಶಾಸಕ**

ಕರ್ನಾಟಕ ಪ್ರದೇಶ ಯುವ ಕಾಂಗ್ರೆಸ್ ರಾಜ್ಯ ಪ್ರಧಾನ ಕಾರ್ಯದರ್ಶಿ ಅಕ್ಷಯ ಐ. ಪಾಟೀಲ, "ಭಾರತೀಯ ಸಂವಿಧಾನ ವಿಶ್ವದಲ್ಲಿಯೇ ಶ್ರೇಷ್ಠವಾದದ್ದು. ಪ್ರಜೆಗಳ ಹಕ್ಕುಗಳ ರಕ್ಷಣೆಗೆ ಸಂವಿಧಾನವೇ ಶಕ್ತಿ" ಎಂದರು.

ಗದಗ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಎಚ್. ಪಾಟೀಲ, "ಭ್ರಾತೃತ್ವ ಮತ್ತು ಸಾಮರಸ್ಯವೇ ಸಂವಿಧಾನದ ಆತ್ಮ" ಎಂದು ಹೇಳಿದರು.

ಬಾಗಲಕೋಟೆಯ ಯುವ ಮುಖಂಡ ವಿನಯ ಆರ್. ತಿಮ್ಮಾಪುರ ಮಾತನಾಡಿದರು.

ರೋಣ ಬೂದೀಶ್ವರಮಠದ ಡಾ. ವಿಶ್ವನಾಥ ಮಹಾಸ್ವಾಮಿಗಳು, ರಹಿಮಾನ ಶಾವಲಿ ದರ್ಗಾದ ಸಯ್ಯದ್ ಮಂಜೂರ ಹುಸೇನ ಶ್ಯಾವಲಿ ಶರಣರು, ಇಟಗಿಯ ಶಿವಶರಣ ಗೆದಿಗೆಪ್ಪಜ್ಜನವರು ಹಾಗೂ ಸೂಡಿ ಮರುಳು ಸಿದ್ದೇಶ್ವರ ಸ್ವಾಮಿಗಳು ಸಾನಿಧ್ಯ ವಹಿಸಿದ್ದರು.

ಸರ್ಕಾರಿ ಸೇವೆಯಲ್ಲಿ ಸಾಧನೆ ಮಾಡಿದ ಮಾದಿಗ ಸಮುದಾಯದವರಿಗೆ ಸನ್ಮಾನ ಹಾಗೂ ಎಸ್‌ಎಸ್‌ಎಲ್‌ಸಿ-ಪಿಯುಸಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು.

### ಜಿ.ಎಸ್. ಪಾಟೀಲರಿಗೆ 'ಜೈ ಭೀಮ್ ರತ್ನ' ರಾಜ್ಯ ಪ್ರಶಸ್ತಿ

ದಲಿತರ ಅಭಿವೃದ್ಧಿ, ಯುವಕರಿಗೆ ಉದ್ಯೋಗ ಸೃಷ್ಟಿ, ನೆಲ-ಜಲ ಸಂರಕ್ಷಣೆಗೆ ನೀಡಿದ ಕೊಡುಗೆ ಹಾಗೂ ಕ್ಷೇತ್ರದ ಜನರೊಂದಿಗೆ ನಿರಂತರ ಸಂಪರ್ಕ ಕಾಯ್ದುಕೊಂಡಿದ್ದಕ್ಕಾಗಿ ಶಾಸಕ ಜಿ.ಎಸ್. ಪಾಟೀಲ ಅವರಿಗೆ 'ಜೈ ಭೀಮ್ ರತ್ನ' ರಾಜ್ಯ ಪ್ರಶಸ್ತಿ ಪ್ರದಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಬೈಲಪ್ಪ ತಳವಾರ, ಬಿ.ವಿ. ಗೌಡರ, ಅರುಣ ಕುಲಕರ್ಣಿ, ವಿ.ಎ. ಕುಂಬಾರ, ಈಶಯ್ಯ ಕಲ್ಲೂರ, ಹನಮಪ್ಪ ಅಬ್ಬಿಗೆರಿ, ಸುರೇಶ ಹಳ್ಳಿಕೇರಿ ಹಾಗೂ ಚಂದ್ರು ಎಂ. ರಾಥೋಡ್ ಅವರನ್ನು ವಿವಿಧ ಕ್ಷೇತ್ರಗಳ ಸೇವೆಗಾಗಿ ಸನ್ಮಾನಿಸಲಾಯಿತು.

### ಸ್ವಚ್ಛತೆಗೆ ಸಾರ್ವಜನಿಕರ ಸಹಕಾರ ಅಗತ್ಯ: ಶಾಸಕ ಡಾ. ಚಂದ್ರು ಲಮಾಣಿ

# "ಕಸ ಮುಕ್ತ ಲಕ್ಷ್ಮೇಶ್ವರಕ್ಕೆ ಜನರೇ ಕೈಜೋಡಿಸಬೇಕು!"

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತೀವ್ರಗತಿಯಲ್ಲಿ ಬೆಳೆಯುತ್ತಿರುವ ಲಕ್ಷ್ಮೇಶ್ವರ ಪಟ್ಟಣದಲ್ಲಿ ಪೌರ ಕಾರ್ಮಿಕರ ಕೊರತೆಯಿಂದ ಸ್ವಚ್ಛತೆ ಸಮಸ್ಯೆ ಹೆಚ್ಚಾಗಿದ್ದು, ಸ್ವಚ್ಛ ಮತ್ತು ಸುಂದರ ಪಟ್ಟಣ ನಿರ್ಮಾಣಕ್ಕೆ ಸಾರ್ವಜನಿಕರ ಸಹಕಾರ ಅತ್ಯಗತ್ಯವಾಗಿದೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಭಾನುವಾರ ಪಟ್ಟಣದ ಪುರಸಭೆಯ 15ನೇ ಹಣಕಾಸು ಯೋಜನೆಯಡಿ ಕಸ ವಿಲೇವಾರಿಗಾಗಿ ಖರೀದಿಸಲಾದ ಹೊಸ ಲೈಲ್ಯಾಂಡ್ ವಾಹನ ಹಾಗೂ ಎರಡು ಟ್ರ್ಯಾಕ್ಟರ್‌ಗಳಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಪಟ್ಟಣದಲ್ಲಿ ಸ್ವಚ್ಛತೆಯ ಕೊರತೆಯಿಂದ ಚರಂಡಿಗಳು ತ್ಯಾಜ್ಯದಿಂದ ತುಂಬಿಕೊಂಡಿದ್ದು, ರಸ್ತೆ ಬದಿಗಳಲ್ಲಿ ಕಸದ ರಾಶಿಗಳು ಕಾಣಿಸುತ್ತಿವೆ. ಈಗಾಗಲೇ ಮಳೆಗಾಲ ಆರಂಭವಾಗಿರುವುದರಿಂದ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಬೇಕಾಗಿದೆ



ಎಂದು ಹೇಳಿದರು.

ಪ್ರತಿ ಶನಿವಾರ ಅಥವಾ ಭಾನುವಾರ ತಾವೂ ಸ್ವತಃ ಸ್ವಚ್ಛತಾ ಕಾರ್ಯದಲ್ಲಿ ಪಾಲ್ಗೊಳ್ಳುವುದಾಗಿ ತಿಳಿಸಿದ ಶಾಸಕ ಲಮಾಣಿ, ಸಾರ್ವಜನಿಕರೂ ಪುರಸಭೆಯೊಂದಿಗೆ ಕೈಜೋಡಿಸಿದರೆ ಮಾತ್ರ ಸ್ವಚ್ಛ ಹಾಗೂ ಸುಂದರ ಪಟ್ಟಣ ನಿರ್ಮಾಣ ಸಾಧ್ಯ ಎಂದು ಕರೆ ನೀಡಿದರು.

ಪುರಸಭೆಯ ಅಧಿಕಾರಿಗಳು ಕೆಟ್ಟು ನಿಂತಿರುವ ಕಸ ಸಂಗ್ರಹ ವಾಹನಗಳನ್ನು ತ್ವರಿತವಾಗಿ ದುರಸ್ತಿ

> "ಲಕ್ಷ್ಮೇಶ್ವರವನ್ನು ಜಿಲ್ಲೆಯಲ್ಲೇ ಮಾದರಿ ಸ್ವಚ್ಛ ಪಟ್ಟಣವನ್ನಾಗಿಸುವ ಗುರಿ ನಮ್ಮದು."
> – **ಡಾ. ಚಂದ್ರು ಲಮಾಣಿ, ಶಾಸಕ**

ಮಾಡಿಸಿ, ಲಭ್ಯವಿರುವ ಎಲ್ಲಾ ಸಂಪನ್ಮೂಲಗಳನ್ನು ಬಳಸಿಕೊಂಡು ಸ್ವಚ್ಛತಾ ಕಾರ್ಯಕ್ಕೆ ಒತ್ತು ನೀಡಬೇಕು ಎಂದು ಸೂಚಿಸಿದರು.

ಪುರಸಭೆಯಿಂದ ನಿರ್ವಹಣೆ ಮಾಡಲಾಗುತ್ತಿರುವ ಶವಾಗಾರ ಹಳೆಯದಾಗಿರುವುದರಿಂದ ಮುಂದಿನ 8 ರಿಂದ 10 ದಿನಗಳಲ್ಲಿ ಹೊಸ ಶವಾಗಾರ ಆರಂಭಿಸಲಾಗುವುದು ಎಂದು ತಿಳಿಸಿದರು.

ಬಳಿಕ ಶಾಸಕ ಡಾ. ಚಂದ್ರು ಲಮಾಣಿ ಅವರು ಸೋಮೇಶ್ವರ ನಗರ ವಾರ್ಡ್‌ನಲ್ಲಿ ಕಾರ್ಯಕರ್ತರು, ಸಾರ್ವಜನಿಕರು ಹಾಗೂ ಪೌರ ಕಾರ್ಮಿಕರೊಂದಿಗೆ ಸ್ವಚ್ಛತಾ ಕಾರ್ಯದಲ್ಲಿ ಪಾಲ್ಗೊಂಡರು.

ಈ ಸಂದರ್ಭದಲ್ಲಿ ಪುರಸಭೆ ಮುಖ್ಯಾಧಿಕಾರಿ ಪರಶುರಾಮ ಗುಡಾದರಿ, ಸುನೀಲ ಮಹಾಂತಶೆಟ್ಟರ, ವಿಜಯ ಹತ್ತಿಕಾಳ, ಎಂ.ಆರ್. ಪಾಟೀಲ, ಗಂಗಾಧರ ಮೆಣಸಿನಕಾಯಿ, ಅನಿಲ ಮುಳಗುಂದ, ಮಂಜುನಾಥ ಹೊಗೆಸೊಪ್ಪಿನ, ಪುರಸಭೆ ವ್ಯವಸ್ಥಾಪಕಿ ಮಂಜುಳಾ ಹೂಗಾರ, ಹಿರಿಯ ಆರೋಗ್ಯ ನಿರೀಕ್ಷಕ ಮಂಜುನಾಥ ಮುದಗಲ್, ಇಂಜಿನಿಯರ್ ಈರಣ್ಣ ದುರಗಣ್ಣವರ, ಗಿರೀಶ ಚೌರಡ್ಡಿ, ರುದ್ರಪ್ಪ ಉಮಚಗಿ, ರಾಮು ನಾಯಕ, ವೀರೇಶ ಸಾಸಲವಾಡ, ಮಂಜುನಾಥ ಗದಗ, ಸಾಗರ ಪಾಟೀಲ, ಶಿವಾನಂದ ಉಪಚಗಿ, ರಮೇಶ ಹಾಳದೋಟದ, ಮಂಜುನಾಥ ಗಜಾಕೋಶ, ಪ್ರವೀಣ ಮುದಗಲ್, ಮುತ್ತಣ್ಣ ದೊಡ್ಡಮನಿ ಸೇರಿದಂತೆ ಪುರಸಭೆ ಸಿಬ್ಬಂದಿ ಹಾಗೂ ಪೌರ ಕಾರ್ಮಿಕರು ಉಪಸ್ಥಿತರಿದ್ದರು.

### ಮೂರು ದಿನಗಳ ರಾಜ್ಯಮಟ್ಟದ ವಿಚಾರ ಸಂಕಿರಣ; ನಾಡಿನ ಖ್ಯಾತ ವಿದ್ವಾಂಸರಿಂದ ಉಪನ್ಯಾಸ

# ನಾಳೆಯಿಂದ ಪುಲಿಗೆರೆಯ ಪ್ರಾಚೀನ ಕನ್ನಡ ವೈಭವ ಅನಾವರಣ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಜಗದ್ಗುರು ವೀರ ಗಂಗಾಧರ ಸಮುದಾಯ ಭವನದಲ್ಲಿ ಮೇ 20ರಿಂದ 22ರವರೆಗೆ ಮೂರು ದಿನಗಳ ಕಾಲ "ಪುಲಿಗೆರೆ ಪರಿಸರದ ಪ್ರಾಚೀನ ಕನ್ನಡ ಸಾಹಿತ್ಯ" ವಿಷಯದ ರಾಜ್ಯಮಟ್ಟದ ವಿಚಾರ ಸಂಕಿರಣ ಜರುಗಲಿದೆ.

ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರ, ಭಾರತೀಯ ಭಾಷಾ ಸಂಸ್ಥೆ, ಉನ್ನತ ಶಿಕ್ಷಣ ಇಲಾಖೆ, ಶಿಕ್ಷಣ ಸಚಿವಾಲಯ, ಭಾರತ ಸರ್ಕಾರ, ಗದಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಲಕ್ಷ್ಮೇಶ್ವರ ತಾಲೂಕ ಕನ್ನಡ ಸಾಹಿತ್ಯ ಪರಿಷತ್ತಿನ ಆಶ್ರಯದಲ್ಲಿ ಬೆಳಿಗ್ಗೆ 10.30ಕ್ಕೆ ಕಾರ್ಯಕ್ರಮ ಆರಂಭವಾಗಲಿದೆ.

ಕಾರ್ಯಕ್ರಮದ ಸಾನಿಧ್ಯವನ್ನು ಗದುಗಿನ ತೋಂಟದಾರ್ಯ ಮಠದ ಜಗದ್ಗುರು ಶ್ರೀ ತೋಂಟದ ಸಿದ್ದರಾಮ ಸ್ವಾಮೀಜಿ ವಹಿಸಲಿದ್ದು, ಉದ್ಘಾಟನೆಯನ್ನು ಕನ್ನಡ ಸಾಹಿತ್ಯ ಪರಿಷತ್ತಿನ ನಿಕಟಪೂರ್ವ ಅಧ್ಯಕ್ಷ ಮನು ಬಳಿಗಾರ ನೆರವೇರಿಸಲಿದ್ದಾರೆ. ಗದಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಅಧ್ಯಕ್ಷತೆ ವಹಿಸಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಶಾಸಕ ಚಂದ್ರು ಲಮಾಣಿ, ಮಾಜಿ ಶಾಸಕರಾದ ಗಂಗಣ್ಣ ಮಹಾಂತಶೆಟ್ಟರ, ಜಿ.ಎಸ್.



ಗಡ್ಡದೇವರಮಠ, ರಾಮಕೃಷ್ಣ ದೊಡ್ಡಮನಿ, ರಾಮಣ್ಣ ಲಮಾಣಿ, ನಿವೃತ್ತ ಪ್ರಾಚಾರ್ಯರಾದ ಎಸ್. ಎಫ್. ಶಿಗ್ಲಿ, ಆರ್.ಬಿ. ಬನ್ನೂರ ಹಾಗೂ ಆರ್.ಎನ್. ಪಾಟೀಲ ಭಾಗವಹಿಸಲಿದ್ದಾರೆ.

ಮೇ 20ರಂದು ಮಧ್ಯಾಹ್ನ 3ಕ್ಕೆ "ಪುಲಿಗೇರಿಯ ಶಾಸನಗಳು" ಕುರಿತು ನಿವೃತ್ತ ಕೆಎಎಸ್ ಅಧಿಕಾರಿ ಹನುಮಾಕ್ಷಿ ಗೋಗಿ ಉಪನ್ಯಾಸ ನೀಡಲಿದ್ದು, 3.15ಕ್ಕೆ "ಪುಲಿಗೆರೆಯ ಐತಿಹಾಸಿಕ ಹಿನ್ನೆಲೆ" ಕುರಿತು ಹಂಪಿ ಕನ್ನಡ ವಿಶ್ವವಿದ್ಯಾಲಯದ ಅಮರೇಶ ಯತಗಲ್ ಮಾತನಾಡಲಿದ್ದಾರೆ.

ಮೇ 21ರಂದು ಬೆಳಿಗ್ಗೆ 10ಕ್ಕೆ "ಪುಲಿಗೆರೆಯ ತಿರುಳ್ಗನ್ನಡ" ಕುರಿತು ಸಂಶೋಧಕ ದೇವರೆಡ್ಡಿ ಹದ್ಲಿ, 11.15ಕ್ಕೆ "ಪಂಪನ ಕಾವ್ಯಗಳು" ಕುರಿತು ಡಾ. ಶಾಂತಿನಾಥ ದಿಬ್ಬದ ಉಪನ್ಯಾಸ ನೀಡಲಿದ್ದಾರೆ. ಮಧ್ಯಾಹ್ನ 2ಕ್ಕೆ ಬೆಂಗಳೂರು ವಿಶ್ವವಿದ್ಯಾಲಯದ ಡಾ. ನಾಗಭೂಷಣ "ಸುರಂಗ ಕವಿಯ ತ್ರಿಶಿಷ್ಟ ಲಕ್ಷಣ ಪುರಾಣ" ಕುರಿತು ಮಾತನಾಡಲಿದ್ದು, ಮಧ್ಯಾಹ್ನ 3ಕ್ಕೆ ಡಾ. ರಾಜಶೇಖರ ಇಚ್ಚಂಗಿ "ಅಚಣ್ಣ ಕವಿಯ ವರ್ಧಮಾನ ಪುರಾಣ" ಕುರಿತು ಉಪನ್ಯಾಸ ನೀಡಲಿದ್ದಾರೆ.

ಮೇ 22ರಂದು ಬೆಳಿಗ್ಗೆ 10ಕ್ಕೆ "ಪುಲಿಗೆರೆಯ ಸೋಮನಾಥ ಮತ್ತು ಆದಯ್ಯ" ಕುರಿತು ಹಂಪಿ ವಿಶ್ವವಿದ್ಯಾಲಯದ ವಿಶ್ರಾಂತ ಕನ್ನಡ ಅಧ್ಯಯನ ವಿಭಾಗದ ಮುಖ್ಯಸ್ಥ ಡಾ. ಕೆ. ರವೀಂದ್ರನಾಥ್ ಹಾಗೂ "ಪುಲಿಗೆರೆ ಸಾಹಿತ್ಯ" ಕುರಿತು ಲಲಿತಾ ಕೆರಿಮನಿ ಉಪನ್ಯಾಸ ನೀಡಲಿದ್ದಾರೆ.

ಮಧ್ಯಾಹ್ನ 2ಕ್ಕೆ ನಡೆಯುವ ಸಮಾರೋಪ ಸಮಾರಂಭದಲ್ಲಿ ಹಂಪಿ ಕನ್ನಡ ವಿಶ್ವವಿದ್ಯಾಲಯದ ಕುಲಪತಿ ಡಿ.ವಿ. ಪರಮಶಿವಮೂರ್ತಿ ಸಮಾರೋಪ ಭಾಷಣ ಮಾಡಲಿದ್ದು, ಯೋಜನಾ ನಿರ್ದೇಶಕ ಪ್ರೊ. ಎನ್.ಎಂ. ತಳವಾರ ಅಧ್ಯಕ್ಷತೆ ವಹಿಸಲಿದ್ದಾರೆ.

ಮೂರು ದಿನಗಳ ಈ ರಾಜ್ಯಮಟ್ಟದ ವಿಚಾರ ಸಂಕಿರಣದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಕನ್ನಡಾಭಿಮಾನಿಗಳು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಹಾಗೂ ತಾಲೂಕು ಘಟಕದ ಅಧ್ಯಕ್ಷ ಈಶ್ವರ ಮೆಡ್ಲೇರಿ ಮನವಿ ಮಾಡಿದ್ದಾರೆ.

### ಸಾಹಿತ್ಯದ ಮೂಲಕ ಬದುಕಿನ ಪ್ರಶ್ನೆಗಳಿಗೆ ಉತ್ತರ ಹುಡುಕುವಂತೆ ಸ್ವಾಮಿ ಶಿವಪ್ರಿಯಾನಂದಜಿ ಮಹಾರಾಜ ಕರೆ

# "ಚಿಂತನೆ ಇಲ್ಲದ ಯುವಶಕ್ತಿ ದೇಶಕ್ಕೆ ಅಪಾಯ!"

■ ವಿಜಯಸಾಕ್ಷಿ ಸುದ್ದಿ, ಗದಗ

ಯುವಕರು ದೈಹಿಕ, ಮಾನಸಿಕ, ನೈತಿಕ ಹಾಗೂ ಆಧ್ಯಾತ್ಮಿಕ ಸದೃಢತೆಯನ್ನು ಬೆಳೆಸಿಕೊಳ್ಳಬೇಕು. ಓದು, ವ್ಯಾಯಾಮ, ಚಿಂತನೆ ಮತ್ತು ಚರ್ಚೆಗಳ ಮೂಲಕ ತಮ್ಮ ವ್ಯಕ್ತಿತ್ವವನ್ನು ರೂಪಿಸಿಕೊಂಡು ದೇಶದ ಅಭಿವೃದ್ಧಿಗೆ ಕೈಜೋಡಿಸಬೇಕು ಎಂದು ಹುಲಕೋಟಿಯ ರಾಮಕೃಷ್ಣ ವಿವೇಕಾನಂದ ಸೇವಾ ಪ್ರತಿಷ್ಠಾನದ ಅಧ್ಯಕ್ಷ ಸ್ವಾಮಿ ಶಿವಪ್ರಿಯಾನಂದಜಿ ಮಹಾರಾಜ ಹೇಳಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಆದರ್ಶ ಶಿಕ್ಷಣ ಸಮಿತಿ ವಾಣಿಜ್ಯ ಪದವಿ ಮಹಾವಿದ್ಯಾಲಯದ ಸಹಯೋಗದಲ್ಲಿ ನಡೆದ ಜಿಲ್ಲಾ ಯುವ ಸಾಹಿತ್ಯ ಸಮಾವೇಶವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಾಹಿತ್ಯ ವ್ಯಕ್ತಿಯನ್ನು ಪರಿಪೂರ್ಣತೆಯೆಡೆಗೆ ಕೊಂಡೊಯ್ಯುವ ಪ್ರಬಲ ಮಾಧ್ಯಮವಾಗಿದೆ. ಸಾಹಿತ್ಯದ ಕನ್ನಡಿಯ ಮೂಲಕ ಬದುಕಿನ ಪ್ರಶ್ನೆಗಳಿಗೆ ಉತ್ತರ ಹುಡುಕುವ ಮನೋಭಾವ ಯುವಕರಲ್ಲಿ ಬೆಳೆಬೇಕು ಎಂದು ಅವರು ತಿಳಿಸಿದರು.

ಯುವಕರು ತಮ್ಮ ಸಾಮರ್ಥ್ಯವನ್ನು ಅರಿತುಕೊಂಡು, ವೈಯಕ್ತಿದಂದು



ಕರೆ ನೀಡಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಯುವಕರು ತಮ್ಮ ಶಕ್ತಿ-ಸಾಮರ್ಥ್ಯಗಳನ್ನು ಅನಪೇಕ್ಷಿತ ಚಟುವಟಿಕೆಗಳಲ್ಲಿ ವ್ಯಯಿಸುತ್ತಿರುವುದು ಆತಂಕಕಾರಿ ಬೆಳವಣಿಗೆ ಎಂದು ಹೇಳಿದರು.

ಅತಿಯಾದ ಅಂತರ್ಜಾಲ ಬಳಕೆ, ಕೃಷಿಯ ಕುರಿತ ಅನಾಸಕ್ತಿ ಹಾಗೂ ಓದುವ ಸಂಸ್ಕೃತಿಯಿಂದ ದೂರವಾಗುತ್ತಿರುವುದು ಇಂದಿನ ಯುವ ಸಮುದಾಯವನ್ನು ಕಾಡುತ್ತಿರುವ ಪ್ರಮುಖ ಸಮಸ್ಯೆಗಳಾಗಿವೆ ಎಂದು ಅವರು ಅಭಿಪ್ರಾಯಪಟ್ಟರು.

ಈ ಹಿನ್ನೆಲೆಯಲ್ಲಿ ಯುವಕರಲ್ಲಿ ಚಿಂತನ-ಮಂಥನ ಮೂಡಿಸುವ ಉದ್ದೇಶದಿಂದಲೇ ಸಮಾವೇಶ ಆಯೋಜಿಸಲಾಗಿದೆ ಎಂದು

> "ಯುವಕರ ಕೈಯಲ್ಲಿ ಪುಸ್ತಕ ಇದ್ದರೆ ಮಾತ್ರ ಸಮಾಜದ ಭವಿಷ್ಯ ಸುರಕ್ಷಿತವಾಗಿರುತ್ತದೆ." ಸ್ವಾಮಿ ಶಿವಪ್ರಿಯಾನಂದಜಿ ಮಹಾರಾಜ, ರಾಮಕೃಷ್ಣ ವಿವೇಕಾನಂದ ಸೇವಾ ಪ್ರತಿಷ್ಠಾನದ ಅಧ್ಯಕ್ಷರು

ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಆದರ್ಶ ಶಿಕ್ಷಣ ಸಮಿತಿಯ ಅಧ್ಯಕ್ಷ ಆನಂದ ಪೋತ್ನಿಸ್, "ಪಠ್ಯದ ಜೊತೆಗೆ ಪ್ರಚಲಿತ ವಿದ್ಯಮಾನಗಳ ಬಗ್ಗೆ ಗಂಭೀರ ಚಿಂತನೆ ನಡೆಸುವ ಮನೋಭಾವ ಯುವಕರಲ್ಲಿ ಬೆಳೆಬೇಕು. ಕಾರ್ಯೋನ್ಮುಖ ಯುವಜನತೆ ಸಮಾಜದ ಶಕ್ತಿಯಾಗಬೇಕು" ಎಂದು ಹೇಳಿದರು.

ವೇದಿಕೆಯಲ್ಲಿ ಪ್ರಾಚಾರ್ಯ ಡಾ. ವಿ.ಟಿ. ನಾಯ್ಕರ, ಜಾನಪದ ಅಕಾಡೆಮಿ ಸದಸ್ಯ ಶಂಕರಣ್ಣ ಸಂಕಣ್ಣವರ, ಹನಮಂತಗೌಡ ಕಲ್ಮನಿ ಉಪಸ್ಥಿತರಿದ್ದರು.

ಬಾಹುಬಲಿ ಜೈನರ್ ಸ್ವಾಗತಿಸಿದರು. ಈಶ್ವರ ಮೆಡ್ಲೇರಿ ನಿರೂಪಿಸಿದರು. ಭಾಗ್ಯಶ್ರೀ ಹುರಕಡ್ಲಿ ವಂದಿಸಿದರು.

ಕಾರ್ಯಕ್ರಮದಲ್ಲಿ ಅಂದಾನೆಪ್ಪ ವಿಭೂತಿ, ಚಂದ್ರಶೇಖರ ವಸ್ತ್ರದ, ಕೆ.ಎಚ್. ಬೇಲೂರ, ಎ.ಎಸ್. ಮಕಾನದಾರ, ಅನ್ನದಾನಿ ಹಿರೇಮಠ, ಅಂದಾನಯ್ಯ ಅರವಟಗಿಮಠ, ಶ್ವೇತಾ ಕೊಟಗಿ, ಎಸ್.ಎಂ. ಕಾತರಕಿ, ಸತೀಶ ಚನ್ನಪ್ಪಗೌಡರ, ಡಿ.ಎಸ್. ಬಾಪುರಿ, ಅಮರೇಶ ರಾಂಪೂರ, ಆರ್.ಎಲ್. ಕುಲಕರ್ಣಿ, ಲಿಂಗರಾಜ ರೇಷ್ಮೆ, ಎಸ್.ಬಿ. ಜಾಧವ, ಎಸ್. ಯು. ಸಜ್ಜನಶೆಟ್ಟರ ಸೇರಿದಂತೆ ಹಲವರು ಭಾಗವಹಿಸಿದ್ದರು.

**ಹಿತನುಡಿ**

ಭಗವಂತ ನೀಡುವ ಶಿಕ್ಷೆ
ನಿಜವಾದ ಪರೀಕ್ಷೆ,
ನಿನ್ನವರಾರೆಂದು
ಬಿಚ್ಚಿಡುವ ನಕ್ಷೆ.

# "ಮಳೆ-ಗಾಳಿಯ ಅಬ್ಬರಕ್ಕೆ ಶಿರಹಟ್ಟಿ ತತ್ತರ!"

▶▶ ಮೊದಲನೇ ಪುಟದಿಂದ

ಮಳೆಯ ರಭಸಕ್ಕೆ ತರಕಾರಿ, ಕಾಯಿಪಲ್ಲೆ ಸೇರಿದಂತೆ ಹಲವು ವಸ್ತುಗಳು ನೀರಿನಲ್ಲಿ ಹರಿದು ಹೋಗಿದ್ದರಿಂದ ವ್ಯಾಪಾರಸ್ಥರಿಗೆ ನಷ್ಟ ಉಂಟಾಯಿತು. ಭಾರೀ ಗಾಳಿಯಿಂದ ಅನೇಕ ಕಡೆ ಗಿಡಮರಗಳು ವಿದ್ಯುತ್ ತಂತಿಗಳ ಮೇಲೆ ಬಿದ್ದ ಪರಿಣಾಮ ಸಂಜೆ 4 ಗಂಟೆಯಿಂದಲೇ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಿತ್ತು. ಮಧ್ಯರಾತ್ರಿಯ ನಂತರ ವಿದ್ಯುತ್ ಪೂರೈಕೆ ಪುನಃಸ್ಥಾಪನೆಯಾಯಿತು. ಸೋಮವಾರ ಬೆಳಗ್ಗಿನಿಂದಲೇ ಹೆಸ್ಕಾಂ ಸಿಬ್ಬಂದಿ ವಿದ್ಯುತ್ ಲೈನ್‌ಗಳ ಸಮೀಪ ಬೆಳೆದಿದ್ದ ಗಿಡಗಳನ್ನು ತೆರವುಗೊಳಿಸುವ ಕಾರ್ಯ ಕೈಗೊಂಡರು. ಸೋಮವಾರ ಸಂಜೆಯೂ ಕೆಲಕಾಲ ಮಳೆಯಾಗಿದ್ದು, ಜನರಲ್ಲಿ ಆತಂಕ ಮುಂದುವರಿದಿತ್ತು.


## ನಿಧನ

### ಕೇಶವರಾಮ ಕೊಳ್ಳಿ



ಗದಗ, 18. ದೇವಾಂಗ ಸಮಾಜದ ಹಿರಿಯರು, ಆದಾಯ ತೆರಿಗೆ ಸಲಹೆಗಾರರು, ನಿಸರ್ಗ ಬಡಾವಣೆಯ ನಿವಾಸಿಯೂ ಆಗಿದ್ದ ಕೇಶವರಾಮ ಗಂಗಾಧರಪ್ಪ ಕೊಳ್ಳಿ(72) ಅವರು ದಿ: 17-05-2026 ರವಿವಾರ ಮಧ್ಯಾಹ್ನ ನಿಧನರಾದರು. ಮೃತರು ಪತ್ನಿ, ಓರ್ವ ಪುತ್ರ, ಮೂವರು ಪುತ್ರಿಯರು, ಸಹೋದರ-ಸಹೋದರಿಯರು, ಅಳಿಯಂದಿರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.ಮೃತರ ಅಂತ್ಯಕ್ರಿಯೆ ದಿ: 18-05-2026 ಸೋಮವಾರ ಮುಂಜಾನೆ ಜರುಗಿತು.

### ಶಿವಪ್ಪ ದೊಡ್ಡಮನಿ



ಡಂಬಳ, 18. ಗ್ರಾಮದ ಡಾ.ಬಿ.ಆರ್.ಅಂಬೇಡ್ಕರ್ ನಗರದ ನಿವಾಸಿ ಮಾದಿಗ ಸಮುದಾಯದ ಹಿರಿಯರಾದ ಶಿವಪ್ಪ ದೊಡ್ಡನಿಂಗಪ್ಪ ದೊಡ್ಡಮನಿ (82) ರವಿವಾರ ನಿಧನ ಹೊಂದಿದರು.

ಮೃತರು ಪತ್ನಿ, ಇಬ್ಬರು ಪುತ್ರರು, ಐವರು ಪುತ್ರಿಯರು, ಸೊಸೆಯಂದಿರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು ಬಳಗ ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಸೋಮವಾರ ಮಧ್ಯಾಹ್ನ ಗ್ರಾಮದ ರುದ್ರ ಭೂಮಿಯಲ್ಲಿ ನಡೆಯಿತು.


ಕರ್ನಾಟಕ ಸರಕಾರ

**ಪುರಸಭೆ ಕಾರ್ಯಾಲಯ ಮುಂಡರಗಿ-582118**

**ದೂರವಾಣಿ:-08371-262232**

ಫ್ಯಾಕ್ಸ ನಂ:-08371-262638 Email Id:ka.mundargi.tmc@gmail.com

Websit:www.mundargitown.gov.in

ಸಂಖ್ಯೆ:ಪುಸಮುಂ/ಎಸ್.ಎಫ್.ಸಿ./ಕಾಮಗಾರಿ ವಿಭಾಗ/2026-27 ದಿನಾಂಕ: 16-05-2026

**ಅಲ್ಪಾವಧಿ ಇ-ಟೆಂಡರ್ ಪ್ರಕಟಣೆ**

ಕರ್ನಾಟಕ ಪಾರದರ್ಶಕ ಅಧಿನಿಯಮ 1999 & 2000 ಕೆ.ಪಿ.ಪಿ. ಪೋರ್ಟಲ್‌ದಲ್ಲಿ ಎಸ್.ಎಫ್.ಸಿ. ಅನುದಾನದಲ್ಲಿ ಕೆ.ಡಬ್ಲ್ಯೂ-1 ದಸ್ತಾವೇಜನಲ್ಲಿ ಕೆ.ಪಿ.ಪಿ. ಪೋರ್ಟಲ್‌ನಲ್ಲಿ ನೊಂದಾಯಿಸಲ್ಪಟ್ಟ ಮತ್ತು ಲೋಕೋಪಯೋಗಿ ಇಲಾಖೆಯಲ್ಲಿ ನೊಂದಾಯಿತ ಅರ್ಹ ಗುತ್ತಿಗೆದಾರರಿಂದ ಟೆಂಡರ್‌ನ್ನು ಆಹ್ವಾನಿಸಲಾಗಿದೆ. ಇಂಡೆಂಟ್ ನಂ. DMA/2026-27/BD/ WORK_INDENT58287, http://kppp.karnataka.gov.in ರಲ್ಲಿ ಸಂಪರ್ಕಿಸಿ ಟೆಂಡರ್ ಸಲ್ಲಿಸಬಹುದಾಗಿದೆ. ಬಿಡ್‌ದಾರರು ಟೆಂಡರ್ ವಿವರಗಳನ್ನು ಕೆ.ಪಿ.ಪಿ. ಪೋರ್ಟಲ್‌ನಲ್ಲಿ ಪಡೆದು, ಸಂಬಂಧಿಸಿದ ಇಎಂಡಿ ಟೆಂಡರ್ ಫೀಗಳನ್ನು Electronic ಪದ್ದತಿಯಲ್ಲಿ ಈ ಕೆಳಗೆ ನಿಗದಿ ಪಡಿಸಿದ ದಿನಾಂಕಗಳಂದು ಟೆಂಡರ್ ಸಲ್ಲಿಸಬಹುದಾಗಿದೆ. ಇ-ಪ್ರೊಕ್ಯೂರಮೆಂಟ್ ಪದ್ಧತಿಯಲ್ಲಿ ಟೆಂಡರ್ ಸಲ್ಲಿಸುವ ಕೊನೆಯ **ದಿನಾಂಕ: 25-05-2026, ಸಾಯಂಕಾಲ 4.30 ರ ವರೆಗೆ,** ಟೆಂಡರ್ ತೆರೆಯುವ **ದಿನಾಂಕ: 27/05/2026 ಬೆಳಿಗ್ಗೆ 11.30 ಕ್ಕೆ**

ಆಡಳಿತ ವೈದ್ಯಾಧಿಕಾರಿಗಳು,
ತಾಲೂಕ ಸಾರ್ವಜನಿಕ ಆಸ್ಪತ್ರೆ,
ಮುಂಡರಗಿ

DIPR/Gadag/70/Deshpandepublicity/2026-27

**"ಎಸ್‌ಐಆರ್ ಹೆಸರಿನಲ್ಲಿ ಮತದಾನದ ಹಕ್ಕು ಕಸಿಯುವ ಹುನ್ನಾರ!" ಮುಸ್ಲಿಂ ಸಮಾಜದ ವೇದಿಕೆಯಿಂದ ತೀವ್ರ ವಿರೋಧ**

# "ಮತದಾನದ ಹಕ್ಕು ಕಸಿಯಲು ಬಿಡುವುದಿಲ್ಲ!"

■ **ವಿಜಯಸಾಕ್ಷಿ ಸುದ್ದಿ, ಗದಗ**

"ಭಾರತದ ಸಂವಿಧಾನ ಪ್ರತಿಯೊಬ್ಬ ನಾಗರಿಕನಿಗೂ ಮತದಾನದ ಹಕ್ಕು ನೀಡಿದೆ. ಆದರೆ ಕೇಂದ್ರ ಸರ್ಕಾರದ ಕುತಂತ್ರ ಹಾಗೂ ಚುನಾವಣಾ ಆಯೋಗದ ಸಂವಿಧಾನ ವಿರೋಧಿ ನಡೆಗಳಿಂದ ಎಸ್‌ಐಆರ್ ಪ್ರಕ್ರಿಯೆ ಮೂಲಕ ಜನರ ಸಂವಿಧಾನಬದ್ಧ ಮತದಾನದ ಹಕ್ಕನ್ನು ಕಸಿದುಕೊಳ್ಳುವ ಹುನ್ನಾರ ನಡೆಯುತ್ತಿದೆ" ಎಂದು ಗದಗ-ಬೆಟಗೇರಿ ಮುಸ್ಲಿಂ ಸಮಾಜದ ವೇದಿಕೆ ಅಧ್ಯಕ್ಷ ಮಹ್ಮದ್ ಯೂಸುಫ್ ನಮಾಜಿ ಆರೋಪಿಸಿದರು.

ನಗರದಲ್ಲಿ ಆಯೋಜಿಸಿದ್ದ ಎಸ್‌ಐಆರ್ ಕುರಿತು ವೇದಿಕೆ ಪದಾಧಿಕಾರಿಗಳು ಹಾಗೂ ಅಲ್ಪಸಂಖ್ಯಾತ ಸಮುದಾಯದ ಮುಖಂಡರ ಸಮಾಲೋಚನಾ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಬಿಹಾರ ಹಾಗೂ ಪಶ್ಚಿಮ ಬಂಗಾಳ ಚುನಾವಣೆ ಸಂದರ್ಭದಲ್ಲಿ ಜಾರಿಗೊಂಡ ಎಸ್‌ಐಆರ್ ಪ್ರಕ್ರಿಯೆಯಿಂದ ಲಕ್ಷಾಂತರ ಜನರು ಮತದಾನದ ಹಕ್ಕಿನಿಂದ ವಂಚಿತರಾಗಿದ್ದಾರೆ ಎಂದು ಆರೋಪಿಸಿದ ಅವರು, ಚುನಾವಣೆಯ ನಂತರ ಅಧಿಕಾರಕ್ಕೆ ಬಂದ ಸರ್ಕಾರಗಳು ಮತದಾನದ ಹಕ್ಕು ಕಳೆದುಕೊಂಡವರಿಗೆ ಸರ್ಕಾರದ ಸೌಲಭ್ಯ ನೀಡುವುದಿಲ್ಲ ಎಂದು ಘೋಷಿಸಿರುವುದು ಆತಂಕಕಾರಿ ಬೆಳವಣಿಗೆ ಎಂದು ಹೇಳಿದರು.

ಎಸ್‌ಐಆರ್ ಪ್ರಕ್ರಿಯೆಯ ಹಿಂದಿನ ಉದ್ದೇಶವನ್ನು ಪ್ರತಿಯೊಬ್ಬರೂ ಅರ್ಥಮಾಡಿಕೊಳ್ಳಬೇಕು. ಸಮುದಾಯದ ಜನರಿಗೆ ಜಾಗೃತಿ ಮೂಡಿಸುವ ಕೆಲಸವನ್ನು ಕಾರ್ಯಕರ್ತರು ಕೈಗೊಳ್ಳಬೇಕು ಎಂದು ಕರೆ ನೀಡಿದರು.

ವೇದಿಕೆ ಕಾರ್ಯದರ್ಶಿ ಇಮ್ತಿಯಾಜ್ ಆರ್. ಮಾನ್ವಿ ಮಾತನಾಡಿ, "ಕೇಂದ್ರ ಸರ್ಕಾರ ಚುನಾವಣಾ ಆಯೋಗವನ್ನು ಕೈಗೊಂಬೆಯಾಗಿ ಬಳಸಿಕೊಂಡು ವಿಶೇಷ ತೀವ್ರ ಪರಿಷ್ಕರಣೆ ನೆಪದಲ್ಲಿ ಮೂಲ ನಿವಾಸಿಗಳ ಮತದಾನದ ಹಕ್ಕನ್ನು ಕಸಿದುಕೊಳ್ಳಲು ಯತ್ನಿಸುತ್ತಿದೆ" ಎಂದು




ಆರೋಪಿಸಿದರು.

ಅರ್ಹ ಮತದಾರರನ್ನು ಪಟ್ಟಿಯಿಂದ ಹೊರಗಿಟ್ಟು ಚುನಾವಣೆಯಲ್ಲಿ ಲಾಭ ಪಡೆಯುವ ಉದ್ದೇಶದಿಂದಲೇ ಎಸ್‌ಐಆರ್ ಪ್ರಕ್ರಿಯೆ ನಡೆಸಲಾಗುತ್ತಿದೆ ಎಂದು ದೂರಿದ ಅವರು, ಎಲ್ಲರೂ ಒಗ್ಗೂಡಿ ಜನಜಾಗೃತಿ ಆಂದೋಲನ ಆರಂಭಿಸಬೇಕಾಗಿದೆ ಎಂದರು.

ವಕೀಲ ಎಂ.ಬಿ. ನದಾಫ್ ಮಾತನಾಡಿ, ಎಸ್‌ಐಆರ್ ಪ್ರಕ್ರಿಯೆ ಸಂವಿಧಾನ ವಿರೋಧಿಯಾಗಿದ್ದು, ಎಲ್ಲ ಸಮುದಾಯಗಳು ಒಗ್ಗೂಡಿ

> "ಮತದಾನದ ಹಕ್ಕು ಕಸಿಯುವ ಯಾವುದೇ ಪ್ರಯತ್ನವನ್ನು ಜನರು ಒಗ್ಗಟ್ಟಿನಿಂದ ಎದುರಿಸಬೇಕು."
> – **ಮಹ್ಮದ್ ಯೂಸುಫ್ ನಮಾಜಿ,** ಗದಗ-ಬೆಟಗೇರಿ ಮುಸ್ಲಿಂ ಸಮಾಜದ ವೇದಿಕೆ ಅಧ್ಯಕ್ಷ

ವಿರೋಧಿಸಬೇಕು ಎಂದು ಹೇಳಿದರು.

ಸಮುದಾಯದ ಯುವಕರು ಬೂತ್ ಮಟ್ಟದಲ್ಲಿ ಸ್ವಯಂಪ್ರೇರಿತವಾಗಿ ಕಾರ್ಯನಿರ್ವಹಿಸಿ ಜನರ ಮತದಾನದ ಹಕ್ಕು ರಕ್ಷಿಸಲು ಮುಂದಾಗಬೇಕು ಎಂದು ಕರೆ ನೀಡಿದರು.

ನಗರಸಭೆ ಸದಸ್ಯ ಜೂನಸಾಬ ನಮಾಜಿ ಮಾತನಾಡಿ, ಗದಗ-ಬೆಟಗೇರಿ ನಗರದ ಎಲ್ಲಾ ವಾರ್ಡ್‌ಗಳಲ್ಲಿ ಯುವಕರಿಗೆ ಮಾಹಿತಿ ನೀಡುವ ಜೊತೆಗೆ ಎಸ್‌ಐಆರ್ ಪ್ರಕ್ರಿಯೆಯಲ್ಲಿ ಅಗತ್ಯ ದಾಖಲೆಗಳ ಕುರಿತು ಅರಿವು ಮೂಡಿಸಬೇಕು ಎಂದು ಹೇಳಿದರು.

ಜಮಿಯತೆ ಉಲ್ಲಮಾ ಸಂಘಟನೆಯ ಮುಖಂಡ ಮೌಲಾನಾ ಶಬ್ಬೀರಹ್ಮದ್ ಬೋದ್ಲೇಖಾನ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಅನ್ವರ್ ಶಿರಹಟ್ಟಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

ಸಭೆಯಲ್ಲಿ ಬಾಬಾಜಾನ ಬಳಗಾನೂರ, ಮುನ್ನಾ ಶೇಖ್, ರಫೀಕ್ ಜಮಾಲಖಾನವರ, ಸುಲೇಮಾನ ಮಾಳೆಕೊಪ್ಪ, ಇರ್ಫಾನ್ ಡಂಬಳ, ವಾಶೀಂ ಖಾಜಿ, ಅಸ್ಲಂ ಎಸ್.ಜಿ., ಉಮರ್ ಫಾರೂಖ್ ಹುಬ್ಬಳ್ಳಿ, ಎ.ಹೆಚ್. ಹೊಸಳ್ಳಿ, ಅಲ್ತಾಫ್ ಹುಬ್ಬಳ್ಳಿ, ಅಲ್ಲಾಭಕ್ಷ ದೊಡ್ಡಮನಿ, ದಾವಲಸಾಬ ಇರಕಲ್ಲ, ಇಬ್ರಾಹಿಂ ಹಳ್ಳಿಕೇರಿ, ಮಹ್ಮದಸಾಬ್ ಮುಲ್ಲಾ, ಕರೀಮಸಾಬ್ ಸುಣಗಾರ, ಆರೀಫ್ ಹುನಗುಂದ, ಸಾದಿಕ್ ನರೇಗಲ್ಲ, ಮುನ್ನಾ ಕಲ್ಮನಿ, ರಿಯಾಜ್ ಪಾಮಡಿ, ಶಬ್ಬೀರ್ ಪೀರಜಾದೆ, ಮೌಲಾಸಾಬ್ ಗಚ್ಚಿ ಸೇರಿದಂತೆ ನೂರಾರು ಪದಾಧಿಕಾರಿಗಳು ಭಾಗವಹಿಸಿದ್ದರು.

---

**ಕಲಾವಿದ ನವೀನ್ ಪತ್ತಾರ ಏಕವ್ಯಕ್ತಿ ಚಿತ್ರಕಲಾ ಪ್ರದರ್ಶನ ಉದ್ಘಾಟನೆ**

# ಬಣ್ಣಗಳಲ್ಲಿ ಮೂಡಿದ ಸೃಜನಶೀಲತೆ



■ **ವಿಜಯಸಾಕ್ಷಿ ಸುದ್ದಿ, ಗದಗ**

ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಇವರ ಧನಸಹಾಯದಲ್ಲಿ ಆಯೋಜಿಸಲಾದ ಕಲಾವಿದ ನವೀನ್ ಪತ್ತಾರ ಅವರ ಏಕವ್ಯಕ್ತಿ ಚಿತ್ರಕಲಾ ಪ್ರದರ್ಶನಕ್ಕೆ ನಗರದ ವಿಜಯ ಕಲಾಮಂದಿರ ಸಂಸ್ಥೆಯ ಕಲಾಮಹರ್ಷಿ ಟಿ.ಪಿ. ಅಕ್ಕಿ ಆರ್ಟ್ ಗ್ಯಾಲರಿಯಲ್ಲಿ ಭಾನುವಾರ ಚಾಲನೆ ದೊರೆಯಿತು.

ವೀರೇಶ್ವರ ಪುಣ್ಯಾಶ್ರಮದ ಸಂಗೀತ ಕಲಾವಿದ ಶ್ರೀ ಗುರುಪಂಚಾಕ್ಷರಿ ಗುರುವರ್ಯರು ಪ್ರದರ್ಶನ ಉದ್ಘಾಟಿಸಿ ಮಾತನಾಡಿ, ಕಲಾವಿದರು ತಮ್ಮ ಕೃತಿ ರಚನೆಗಳ ಮೂಲಕ ಕಲಾಕ್ಷೇತ್ರದಲ್ಲಿ ಉನ್ನತ ಮಟ್ಟಕ್ಕೆ ಬೆಳೆಯಬೇಕು ಎಂದು ಹಾರೈಸಿದರು.

> "ಕಲಾವಿದನ ಸೃಜನಶೀಲತೆ ಸಮಾಜದ ಸಾಂಸ್ಕೃತಿಕ ಅರಿವನ್ನು ಮತ್ತಷ್ಟು ಸಮೃದ್ಧಗೊಳಿಸುತ್ತದೆ."
> – **ಕೃಷ್ಣ ಕೆ.ಎಂ.,** ಪ್ರಾಚಾರ್ಯರು, ವಿಜಯ ಚಿತ್ರಕಲಾ ಮಹಾವಿದ್ಯಾಲಯ

ವಿಜಯ ಕಲಾಮಂದಿರ ಚಿತ್ರಕಲಾ ಮಹಾವಿದ್ಯಾಲಯದ ಪ್ರಾಚಾರ್ಯ ಕೃಷ್ಣ ಕೆ.ಎಂ. ಮಾತನಾಡಿ, "ನವೀನ್ ಪತ್ತಾರ ಅವರು ಶಿಲ್ಪಕಲೆಯ ಅಂಶಗಳನ್ನು ಬಳಸಿ ಸೃಜನಶೀಲ ಕಲಾಕೃತಿಗಳನ್ನು ರಚಿಸಿದ್ದಾರೆ. ಅವರ ಕಲಾಕೃತಿಗಳಲ್ಲಿನ ಬಣ್ಣಗಳ ಬಳಕೆ ಹಾಗೂ ವಿನ್ಯಾಸ ವೈಶಿಷ್ಟ್ಯಪೂರ್ಣವಾಗಿದ್ದು, ಕಲಾಪ್ರೇಮಿಗಳ ಗಮನ ಸೆಳೆಯುತ್ತಿವೆ" ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕಲಾಕ್ಷೇತ್ರದಲ್ಲಿ ನವೀನ್ ಪತ್ತಾರ ಅವರ ಸಾಧನೆ ವಿದ್ಯಾರ್ಥಿಗಳಿಗೆ ಮಾರ್ಗದರ್ಶಕವಾಗಿದೆ.

ವಿದ್ಯಾರ್ಥಿ ಗಳು ಕೇವಲ ಕೃತಿ ರಚನೆಗೆ ಮಾತ್ರ ಸೀಮಿತವಾಗದೆ, ಕಲಾಕ್ಷೇತ್ರದಲ್ಲಿ ಆಗುತ್ತಿರುವ ಬೆಳವಣಿಗೆ ಮತ್ತು ಬದಲಾವಣೆಗಳ ಅರಿವು ಹೊಂದುವುದು ಅಗತ್ಯ ಎಂದು ಅವರು ಹೇಳಿದರು.

ಪ್ರಾರಂಭದಲ್ಲಿ ಕಲಾವಿದ ನವೀನ್ ಪತ್ತಾರ ತಮ್ಮ ಕಲಾಕೃತಿಗಳು ಹಾಗೂ ಕಲಾಜೀವನದ ಅನುಭವಗಳನ್ನು ಹಂಚಿಕೊಂಡರು.

ಉಪನ್ಯಾಸಕ ಶರಣಪ್ಪ ಬಿ.ಹೆಚ್. ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

---

**ಮೇ ಸಾಹಿತ್ಯ ಮೇಳದಲ್ಲಿ ಒಕ್ಕೊರಲ ಆಗ್ರಹ – ಮತದಾರರ ಹಕ್ಕು ಕಸಿಯುವ ಹುನ್ನಾರ ಎಂದು ಆರೋಪ**

# "ಅಸಂವಿಧಾನಿಕ ಎಸ್‌ಐಆರ್ ರದ್ದುಪಡಿಸಿ"

■ **ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ಎಸ್‌ಐಆರ್ ಮೂಲಕ ಮತದಾರರ ಪಟ್ಟಿಯಿಂದ ನಿರ್ದಿಷ್ಟ ವರ್ಗಗಳನ್ನು ಹೊರಗಿಡುವ ವ್ಯವಸ್ಥಿತ ತಂತ್ರ ರೂಪಿಸಲಾಗುತ್ತಿದೆ ಎಂದು ಆರೋಪಿಸಿ, ಅಸಂವಿಧಾನಿಕ ಎಸ್‌ಐಆರ್‌ನ್ನು ತಕ್ಷಣ ರದ್ದುಪಡಿಸಬೇಕು ಎಂಬ ಒಕ್ಕೊರಲ ಆಗ್ರಹ ಮೇ ಸಾಹಿತ್ಯ ಮೇಳದಲ್ಲಿ ವ್ಯಕ್ತವಾಯಿತು.

ನಗರದ ಆರ್.ಎನ್. ಶೆಟ್ಟಿ ಕಲ್ಯಾಣ ಮಂಟಪದಲ್ಲಿ ನಡೆದ ಮೇ ಸಾಹಿತ್ಯ ಮೇಳದಲ್ಲಿ "ಎಸ್‌ಐಆರ್ ಸಮಸ್ಯೆ: ಜನಾಂದೋಲನ" ವಿಷಯದ ಚರ್ಚಾಗೋಷ್ಠಿಯಲ್ಲಿ ವಿವಿಧ ಹೋರಾಟಗಾರರು, ಚಿಂತಕರು ಮತ್ತು ರಾಜಕೀಯ ಮುಖಂಡರು ತಮ್ಮ ಅಭಿಪ್ರಾಯ ಮಂಡಿಸಿದರು.

ಚರ್ಚೆಯ ಬಳಿಕ ಮೇ ಮೇಳದ ನಿಲುವು ಮಂಡಿಸಿದ ಕೆ. ಫಣಿರಾಜ್, "ಎಸ್‌ಐಆರ್ ಅಸಂವಿಧಾನಿಕ ಪ್ರಕ್ರಿಯೆಯಾಗಿದ್ದು, ಅದನ್ನು ತಕ್ಷಣ ಹಿಂಪಡೆಯಬೇಕು" ಎಂದು ಒತ್ತಾಯಿಸಿದರು.

ಹೋರಾಟಗಾರ ಹಾಗೂ ಚಿಂತಕ ಮಾವಳ್ಳಿ ಶಂಕರ್



ಮಾತನಾಡಿ, "ಬಿಜೆಪಿ ರೂಪಿಸಿರುವ ಎಸ್‌ಐಆರ್ ಹುನ್ನಾರವನ್ನು ಸಮರ್ಥವಾಗಿ ಎದುರಿಸುವಲ್ಲಿ ಕಾಂಗ್ರೆಸ್ ವಿಫಲವಾಗಿದೆ. ಈ ಜವಾಬ್ದಾರಿಯನ್ನು ಜನಚಳುವಳಿಗಳೇ ನಿರ್ವಹಿಸಬೇಕು" ಎಂದು ಹೇಳಿದರು.

"ಸಂಸತ್ತಿನಲ್ಲಿ ಒಂದು ಕಡೆ ಸೆಂಗೋಲ್ ಸ್ಥಾಪನೆ, ಮತ್ತೊಂದೆಡೆ ಸಂವಿಧಾನ ಇರಿಸಲಾಗಿದೆ. ಇಲ್ಲಿ ಯಾವುದು ಯಾವುದರ ಮೇಲೆ ಸವಾರಿ ಮಾಡುತ್ತಿದೆ ಎಂಬುದನ್ನು ಜನ ಅರ್ಥಮಾಡಿಕೊಳ್ಳಬೇಕು. ಸಂವಿಧಾನದ ಮೇಲೆ ಧಾರ್ಮಿಕ ಸಂಕೇತಗಳು ಹೇರಳವಾಗುತ್ತಿವೆ" ಎಂದು ಅವರು ಎಚ್ಚರಿಸಿದರು.

> "ಮತದಾರರ ಪಟ್ಟಿಯಿಂದ ಬಡವರು ಮತ್ತು ದುರ್ಬಲ ವರ್ಗಗಳನ್ನು ಹೊರಗಿಡುವ ರಾಜಕೀಯ ಹುನ್ನಾರವೇ ಎಸ್‌ಐಆರ್."
> – **ಕೆ. ಪ್ರಕಾಶ,** ಸಿಪಿಐ ರಾಜ್ಯ ಕಾರ್ಯದರ್ಶಿ

ಸಿಪಿಐ ರಾಜ್ಯ ಕಾರ್ಯದರ್ಶಿ ಕೆ. ಪ್ರಕಾಶ ಮಾತನಾಡಿ, "2002ರಿಂದ ಎಸ್‌ಐಆರ್ ನಡೆಯುತ್ತಿದೆ ಎಂದು ಚುನಾವಣಾ ಆಯೋಗ ಹೇಳುತ್ತಿದೆ. ಆದರೆ ಆ ವೇಳೆ ಯಾವ ದಾಖಲೆಗಳನ್ನು ಕೇಳಲಾಗಿತ್ತು ಎಂಬ ಮಾಹಿತಿಯನ್ನು ಕೇಳಿದರೂ ಉತ್ತರ ಬಂದಿಲ್ಲ" ಎಂದು ಆರೋಪಿಸಿದರು.

"ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆ ಬೇರೆ, ಆದರೆ ಎಸ್‌ಐಆರ್ ಮೂಲಕ ಸಂಪೂರ್ಣ ಹೊಸ ಮತದಾರರ ಪಟ್ಟಿ ಸಿದ್ಧಪಡಿಸಲು ಹೊರಟಿರುವುದರ ಹಿಂದೆ ರಾಜಕೀಯ ಉದ್ದೇಶವಿದೆ. ಆಯೋಗ ಕೇಳಿರುವ 11 ದಾಖಲೆಗಳನ್ನು ಬಡವರು ಮತ್ತು ದುರ್ಬಲ ವರ್ಗದವರು ಒದಗಿಸುವುದು ಕಷ್ಟಸಾಧ್ಯ" ಎಂದು ಹೇಳಿದರು.

ಮುಂದಿನ 16 ರಾಜ್ಯಗಳ ಚುನಾವಣೆಗೆ ಮುನ್ನ ಸುಮಾರು 10 ಕೋಟಿ ಮತದಾರರನ್ನು ಹೊರಗಿಡುವ ಹುನ್ನಾರ ಇದಾಗಿದೆ ಎಂದು ಅವರು ಗಂಭೀರ ಆರೋಪ ಮಾಡಿದರು.

ನೂರ್ ಶ್ರೀಧರ್ ಮಾತನಾಡಿ, "ಬಿಹಾರ ಮತ್ತು ಪಶ್ಚಿಮ ಬಂಗಾಳದಲ್ಲಿ ಎಸ್‌ಐಆರ್ ಪರಿಣಾಮಗಳು ಕಂಡುಬಂದಿವೆ. ಅದೇ ಪರಿಸ್ಥಿತಿ ಕರ್ನಾಟಕದಲ್ಲಿ ಮರುಕಳಿಸದಂತೆ ಜನ ಎಚ್ಚರಿಕೆಯಿಂದಿರಬೇಕು" ಎಂದು ಹೇಳಿದರು.

ಸಿಪಿಐ(ಎಂ) ರಾಜ್ಯ ಕಾರ್ಯದರ್ಶಿ ಸಾತಿ ಸುಂದರೇಶ್ ಮಾತನಾಡಿ, "ಎಸ್‌ಐಆರ್ ವಿರೋಧಿ ಹೋರಾಟವನ್ನು ಪ್ರತಿಯೊಂದು ಮತಗಟ್ಟೆ ಹಂತದವರೆಗೆ ಕೊಂಡೊಯ್ಯಬೇಕು" ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಎಸ್.ಎಸ್. ಹರ್ಲಾಪುರ ಹಾಗೂ ಬಾಬಾಜಾನ್ ಮುಧೋಳ ಉಪಸ್ಥಿತರಿದ್ದರು. ಚಂದ್ರಶೇಖರ ಗೊರೆಬಾಳ ಚರ್ಚಾ ಸಮನ್ವಯ ನಿರ್ವಹಿಸಿದರು.

---

**ಗದಗ-ಬೆಟಗೇರಿಯಲ್ಲಿ ಜನಜೀವನ ಅಸ್ತವ್ಯಸ್ತ । ಮೇಲ್ಸೇತುವೆ ನಿರ್ಮಾಣಕ್ಕೆ ಇಮ್ತಿಯಾಜ್ ಮಾನ್ವಿ ಒತ್ತಾಯ**

# "ಮಳೆ ಅವಾಂತರಕ್ಕೆ ನಗರಸಭೆ-ಹೆಸ್ಕಾಂ ನಿರ್ಲಕ್ಷ್ಯವೇ ಕಾರಣ!"

■ **ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಅವಳಿ ನಗರದಲ್ಲಿ ಭಾನುವಾರ ಸುರಿದ ಭಾರೀ ಮಳೆ ಹಾಗೂ ಬಿರುಗಾಳಿಯಿಂದ ಅನೇಕ ಕಡೆಗಳಲ್ಲಿ ಮರಗಳು ಮತ್ತು ವಿದ್ಯುತ್ ಕಂಬಗಳು ಧರೆಗುರುಳಿ ರಸ್ತೆ ಸಂಚಾರ ಅಸ್ತವ್ಯಸ್ತಗೊಂಡಿದ್ದು, ಸಾರ್ವಜನಿಕರು ಪರದಾಡುವಂತಾಗಿದೆ. ಈ ಅವಾಂತರಗಳಿಗೆ ನಗರಸಭೆ ಹಾಗೂ ಹೆಸ್ಕಾಂ ಅಧಿಕಾರಿಗಳ ನಿರ್ಲಕ್ಷ್ಯವೇ ಕಾರಣ ಎಂದು ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ್ ಆರ್. ಮಾನ್ವಿ ಆರೋಪಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಮಳೆಗಾಲ ಆರಂಭವಾದಾಗ ಪ್ರತಿ ವರ್ಷವೂ ಇದೇ ರೀತಿಯ ಸಮಸ್ಯೆಗಳು ಎದುರಾಗುತ್ತಿದ್ದರೂ ನಗರಸಭೆ ಮತ್ತು ಹೆಸ್ಕಾಂ ಅಧಿಕಾರಿಗಳು ಯಾವುದೇ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳದೇ ಕಣ್ಣಿದ್ದೂ ಕುರುಡರಂತೆ ವರ್ತಿಸುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಗದಗದಿಂದ ಬೆಟಗೇರಿ ಭಾಗಕ್ಕೆ ಸಂಪರ್ಕ ಕಲ್ಪಿಸುವ ಎರಡು ಸೇತುವೆಗಳಲ್ಲಿ ಮಳೆ ಬಂದಾಗಲೆಲ್ಲ ನೀರು ತುಂಬಿಕೊಳ್ಳುತ್ತಿದ್ದು, ಸಾರ್ವಜನಿಕರು ಹಾಗೂ ವಾಹನ ಸವಾರರು ಸಂಚಾರಕ್ಕೆ ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಸುಮಾರು ಒಂದು ಗಂಟೆಗೂ ಹೆಚ್ಚು ಕಾಲ



ಸುರಿದ ಮಳೆ ಹಾಗೂ ಬಿರುಗಾಳಿಯಿಂದ ರಸ್ತೆಗಳ ಮೇಲೆ ಮರಗಳು ಮತ್ತು ವಿದ್ಯುತ್ ಕಂಬಗಳು ಉರುಳಿಬಿದ್ದ ಪರಿಣಾಮ ವಾಹನ ಸವಾರರು ಭಯಭೀತರಾಗಿದ್ದಾರೆ ಎಂದು ತಿಳಿಸಿದ್ದಾರೆ.

ಅನೇಕ ಪ್ರದೇಶಗಳಲ್ಲಿ ಮರಗಳು ಹಾಗೂ ವಿದ್ಯುತ್ ಕಂಬಗಳು ವಾಹನಗಳ ಮೇಲೆ ಬಿದ್ದ ಪರಿಣಾಮ ಹಲವು ವಾಹನಗಳು ಜಖಂಗೊಂಡಿವೆ. ಸರ್ಕಾರವು ಅವಳಿ ನಗರದ ಅಭಿವೃದ್ಧಿಗೆ ಕೋಟ್ಯಂತರ ರೂಪಾಯಿ ಅನುದಾನ ನೀಡುತ್ತಿದ್ದರೂ ಅಧಿಕಾರಿಗಳ ಬೇಜವಾಬ್ದಾರಿಯಿಂದ ರಸ್ತೆಗಳ ಸ್ಥಿತಿ ಸುಧಾರಿಸಿಲ್ಲ ಎಂದು ದೂರಿದ್ದಾರೆ.

> "ಪ್ರತಿ ಮಳೆಗಾಲಕ್ಕೂ ಜನರು ಸಂಕಷ್ಟ ಅನುಭವಿಸುತ್ತಿದ್ದಾರೆ; ಅಧಿಕಾರಿಗಳ ನಿರ್ಲಕ್ಷ್ಯವೇ ಇದಕ್ಕೆ ಮೂಲ ಕಾರಣ."
> – **ಇಮ್ತಿಯಾಜ್ ಆರ್. ಮಾನ್ವಿ,** ಹೋರಾಟಗಾರ

ಗದಗ-ಬೆಟಗೇರಿ ಸಂಪರ್ಕಕ್ಕೆ ಇರುವ ಅಂಡರ್‌ಬ್ರಿಡ್ಜ್ ಮತ್ತು ಬಳ್ಳಾರಿ ಬ್ರಿಡ್ಜ್‌ಗಳಲ್ಲಿ ಮಳೆ ನೀರು ತುಂಬಿಕೊಳ್ಳುವುದರಿಂದ ಸಂಚಾರ ಸಂಪೂರ್ಣ ಸ್ಥಗಿತಗೊಳ್ಳುವ ಪರಿಸ್ಥಿತಿ ನಿರ್ಮಾಣವಾಗುತ್ತಿದೆ. ಈ ಸಮಸ್ಯೆಗೆ ಶಾಶ್ವತ ಪರಿಹಾರವಾಗಿ ಮೇಲ್ಸೇತುವೆ ನಿರ್ಮಾಣ ಮಾಡಬೇಕೆಂದು ಅನೇಕ ಬಾರಿ ಹೋರಾಟ ನಡೆಸಿದ್ದರೂ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿದ್ದಾರೆ ಎಂದು ಆರೋಪಿಸಿದ್ದಾರೆ.

ತಕ್ಷಣವೇ ಜಿಲ್ಲಾಡಳಿತ, ಜನಪ್ರತಿನಿಧಿಗಳು ಹಾಗೂ ನಗರಸಭೆ ಅಧಿಕಾರಿಗಳು ಎಚ್ಚೆತ್ತುಕೊಂಡು ಸಾರ್ವಜನಿಕರ ಸಮಸ್ಯೆಗೆ ಸ್ಪಂದಿಸಬೇಕು. ಮಳೆಗಾಲದಲ್ಲಿ ಸಂಚಾರಕ್ಕೆ ತೊಂದರೆ ಆಗದಂತೆ ಮುಂಚಿತ ಕ್ರಮ ಕೈಗೊಳ್ಳಬೇಕು ಎಂದು ಇಮ್ತಿಯಾಜ್ ಮಾನ್ವಿ ಒತ್ತಾಯಿಸಿದ್ದಾರೆ.

---

**ಧಾರ್ಮಿಕ ಶಿಕ್ಷಣದ ಜೊತೆಗೆ ಮಾನವೀಯ ಮೌಲ್ಯ ಬೆಳೆಸಿಕೊಳ್ಳಿ: ಡಂಬಳದಲ್ಲಿ ಧರ್ಮಗುರುಗಳ ಕರೆ**

# "ಸಮಾಜ ಸೇವೆಯೇ ಅಲ್ಲಾಹನ ಕಾರ್ಯ"

■ **ವಿಜಯಸಾಕ್ಷಿ ಸುದ್ದಿ, ಡಂಬಳ**

ಸಮಾಜದಲ್ಲಿ ಮನುಷ್ಯನು ಉತ್ತಮ ಬದುಕು ನಡೆಸಬೇಕಾದರೆ ಶಿಕ್ಷಣ ಎಷ್ಟು ಮುಖ್ಯವೋ, ಅದೇ ರೀತಿ ಧಾರ್ಮಿಕ ಶಿಕ್ಷಣವೂ ಅಷ್ಟೇ ಅಗತ್ಯವಾಗಿದೆ ಎಂದು ಮುಸ್ಲಿಂ ಸಮಾಜದ ಧರ್ಮಗುರು ಮಹಮ್ಮದ್ ಅಲಿ ಹೇಳಿದರು.

ಡಂಬಳ ಗ್ರಾಮದ ಅಂಜುಮನ್ ಏ ಇಸ್ಲಾಂ ಸಮಿತಿಯಡಿ ಜುಮ್ಮಾ ಮಸೀದಿ ಆವರಣದಲ್ಲಿ ಮಕ್ಕಳಿಗೆ ಲೌಕಿಕ ಜ್ಞಾನ ಹಾಗೂ ಸತ್ಯದ ಧಾರ್ಮಿಕ ಹಾದಿ ಕುರಿತು ಆಯೋಜಿಸಿದ್ದ ಪ್ರವಚನ ಮತ್ತು ಮಕ್ಕಳ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಇಸ್ಲಾಂ ಧರ್ಮದಲ್ಲಿ ನಂಬಿಕೆ, ದಿನಕ್ಕೆ ಐದು ಬಾರಿ ಕಡ್ಡಾಯ ನಮಾಜ್, ಹಜ್ ಯಾತ್ರೆ, ದಾನಧರ್ಮ ಹಾಗೂ ಉಪವಾಸಕ್ಕೆ ವಿಶೇಷ ಮಹತ್ವ ನೀಡಲಾಗಿದೆ ಎಂದು ತಿಳಿಸಿದರು.

ಸಮಾಜದ ಪ್ರತಿಯೊಬ್ಬರ ಹಿತಕ್ಕಾಗಿ ತಮ್ಮನ್ನು ತೊಡಗಿಸಿಕೊಂಡು ಸೇವೆ ಸಲ್ಲಿಸುವುದೇ ನಿಜವಾದ ಅಲ್ಲಾಹನ ಕಾರ್ಯವಾಗಿದೆ ಎಂದು ಅವರು ಹೇಳಿದರು.

ಧರ್ಮಗುರು ಅಬ್ದುಲ್ ಗಫಾರ್ ಮಾತನಾಡಿ, ಖುರಾನ್ ಆದೇಶದಂತೆ ಸಮಾಜದ ಪ್ರತಿಯೊಬ್ಬರೊಂದಿಗೆ



ಪ್ರೀತಿ ಮತ್ತು ಸಹೋದರತ್ವದಿಂದ ನಡೆದುಕೊಳ್ಳಬೇಕು. ಗ್ರಾಮ ಮತ್ತು ನಗರಗಳಲ್ಲಿ ಇರುವ ಕಡುಬಡವರಿಗೆ ಸಾಧ್ಯವಾದಷ್ಟು ಸಹಾಯ ಮಾಡುವ ಮೂಲಕ ಬದುಕನ್ನು ಸಾರ್ಥಕಗೊಳಿಸಿಕೊಳ್ಳಬೇಕು ಎಂದು ತಿಳಿಸಿದರು.

ರಂಜಾನ್ ತಿಂಗಳಲ್ಲಿ ಮಾತ್ರವಲ್ಲದೆ, ಉಳಿದ ದಿನಗಳಲ್ಲಿಯೂ ನಿಯಮಿತವಾಗಿ ನಮಾಜ್ ಆಚರಿಸಬೇಕು ಎಂದು ಅವರು ಕರೆ ನೀಡಿದರು.

ಸಮಾಜ ಸೇವಕ ಬುಡ್ನೆಸಾಬ ಅತ್ತಾರ ಮಾತನಾಡಿ, ಧರ್ಮವನ್ನು ಸರಿಯಾಗಿ ಅರ್ಥಮಾಡಿಕೊಂಡು ಸತ್ಯ, ನ್ಯಾಯ ಮತ್ತು ನಿಷ್ಠೆಯಿಂದ ಬದುಕುವುದು ಅತ್ಯಂತ ಮುಖ್ಯ. ಗ್ರಾಮದ ಅಭಿವೃದ್ಧಿ ಹಾಗೂ ಜನರ ಹಿತಕ್ಕಾಗಿ ಪ್ರತಿಯೊಬ್ಬರೂ ಶ್ರಮಿಸಬೇಕು ಎಂದು ಹೇಳಿದರು.

> "ದಿನಕ್ಕೆ ಐದು ಬಾರಿ ನಮಾಜ್, ದಾನಧರ್ಮ, ಉಪವಾಸ, ಹಜ್ ಯಾತ್ರೆಯ ಜೊತೆಗೆ ಸಮಾಜದ ಪ್ರತಿಯೊಬ್ಬರ ಹಿತಕ್ಕಾಗಿ ದುಡಿಯುವುದೇ ನಿಜವಾದ ಅಲ್ಲಾಹನ ಸೇವೆ."
> – **ಮಹಮ್ಮದ್ ಅಲಿ,** ಧರ್ಮಗುರು

ಕಾರ್ಯಕ್ರಮದಲ್ಲಿ ಮಕ್ಕಳು ಖುರಾನ್ ಪಠಣ, ನಮಾಜ್, ದಾನಧರ್ಮ ಮತ್ತು ಹಜ್ ಆಚರಣೆಯ ವಿಧಾನಗಳ ಕುರಿತು ಮನೋಜ್ಞವಾಗಿ ವಿವರಿಸಿದರು. ಉತ್ತಮವಾಗಿ ಪ್ರಸ್ತುತಪಡಿಸಿದ ವಿದ್ಯಾರ್ಥಿಗಳಿಗೆ ಪೆನ್ ಹಾಗೂ ನೋಟು ಪುಸ್ತಕಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಧರ್ಮಗುರುಗಳಾದ ಅಬ್ದುಲಖಾದರ್ ಮುಲ್ಲಾ, ಮಹಬೂಬಸಾಬ, ಸಿಕಂದರ್, ಮಹಬೂಬ ಲಕ್ಕುಂಡಿ, ಅಂಜುಮನ್ ಅಧ್ಯಕ್ಷ ಬಶೀರಹಮ್ಮದ ತಾಂಬೋಟಿ, ಶಫೀಕ್ ಮೂಲಿಮನಿ, ಖಾದರಸಾಬ ಬಾಗಲಿ, ಬಂದುಸಾಬ ಜಲಾಲನವರ, ಹುಸೇನಸಾಬ ದೊಡ್ಡಮನಿ, ಬುಡ್ನೆಸಾಬ ತಾಂಬೋಟಿ, ರಿಯಾಜ್ ಹೊಂಬಳ, ಮೋದಿನಸಾಬ ಕಾಸ್ತಾರ, ಮೌಲಾಹುಸೇನ ಡೋಲಿ, ಡಿ.ಡಿ. ಸೊರಟೂರ, ರಫೀಕ್‌ಸಾಬ ತಾಂಬೋಟಿ, ಮಹಮ್ಮದಗೌಸ್ ಅತ್ತಾರ, ಮೀರಾಸಾಬ ದೊಡ್ಡಮನಿ, ಬುಡ್ನೆಸಾಬ ಮೂಲಿಮನಿ, ನಜೀರ್ ಗದಗ, ಬಾಬುಸಾಬ ಸರಖಾವಾಸ, ನನ್ನೆಸಾಬ ಜಲಾಲನವರ, ಗೌಸುಸಾಬ ನಧಾಪ, ಮುರ್ತುಜಾ ಮನಿಯಾರ, ಹುಸೇನಸಾಬ ಮಲ್ಲಾಡದ, ಮಹಬೂಬ ಹಳ್ಳಿಕೇರಿ, ಖಾಜಾಸಾಬ ಮನಿಯಾರ, ಸಿಕಂದರ್ ಹಳ್ಳಿಕೇರಿ, ಮಹಮ್ಮದ ಮನಿಯಾರ ಸೇರಿದಂತೆ ಗ್ರಾಮದ ಹಿರಿಯರು, ಯುವಕರು, ಮಹಿಳೆಯರು ಮತ್ತು ಮಕ್ಕಳು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka